ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 90 RNI Number : KNKAN/25/A2770 09-04-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :90 ರಾಯಚೂರು 09-04-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

ರಾಜ್ಯದಲ್ಲಿ ಅಂತರ್ಜಲ ಬಳಕೆಯಲ್ಲಿ ಗಣನೀಯ ಇಳಿಕೆ; ವಾರ್ಷಿಕ ಅಂತರ್ಜಲ ಮರುಪೂರಣ ಸಾಮರ್ಥ್ಯ ಏರಿಕೆ

ಬೆಂಗಳೂರು: ಜಲಸಂರಕ್ಷಣಾ ಯೋಜನೆಗಳಿಂದಾಗಿ ರಾಜ್ಯದಲ್ಲಿ ಅಂತರ್ಜಲ ಮರುಪೂರಣ ಸಾಮರ್ಥ್ಯದಲ್ಲಿ ಗಣನೀಯವಾಗಿ ಏರಿಕೆಯಾಗಿದೆ. ಹಾಗೆಯೇ, ಉತ್ತಮ ಮಳೆ ಹಾಗೂ ಜನಜಾಗೃತಿ ಅಭಿಯಾನದ ಪರಿಣಾಮವಾಗಿ ಅಂತರ್ಜಲ ಬಳಕೆಯಲ್ಲಿ ಗಣನೀಯವಾದ ಇಳಿಕೆ ಕಂಡುಬಂದಿದೆ ಎಂದು ಸಣ್ಣ ನೀರಾವರಿ ಸಚಿವ ಎನ್.ಎಸ್. ಬೋಸರಾಜು ತಿಳಿಸಿದರು.

ವಿಕಾಸಸೌಧದ ತಮ್ಮ ಕಚೇರಿಯಲ್ಲಿ ಬುಧವಾರ 2025ನೇ ಸಾಲಿನ ಅಂತರ್ಜಲ ಮೌಲ್ಯಮಾಪನ ವರದಿ ಬಿಡುಗಡೆಗೊಳಿಸಿ ಅವರು ಮಾತನಾಡಿದರು. ಕಳೆದ ಸಾಲಿನಲ್ಲಿ ಆದಂತಹ ಉತ್ತಮ ಮಳೆ ಹಾಗೂ ಸರ್ಕಾರದ ಭದ್ರ ಜಲ ಸಂರಕ್ಷಣಾ ನೀತಿಗಳ ಯಶಸ್ಸಿನ ಫಲವಾಗಿ, ಕರ್ನಾಟಕವು ಅಂತರ್ಜಲ ಸೂಚ್ಯಂಕಗಳಲ್ಲಿ ಗಮನಾರ್ಹ ಸುಧಾರಣೆಯನ್ನು ದಾಖಲಿಸಿದೆ. ದತ್ತಾಂಶಗಳ ಪ್ರಕಾರ, ರಾಜ್ಯದಲ್ಲಿ ಒಟ್ಟಾರೆಯಾಗಿ ಅಂತರ್ಜಲ ಬಳಕೆಯು ಗಣನೀಯವಾಗಿ ಇಳಿಕೆಯಾಗಿದ್ದು, ವಾರ್ಷಿಕವಾಗಿ ಅಂತರ್ಜಲ ಮರುಪೂರಣ ಸಾಮರ್ಥ್ಯದಲ್ಲಿ ಭಾರಿ ಏರಿಕೆಯಾಗಿದೆ ಎಂದರು.



ಈ ವರದಿಯ ಪ್ರಕಾರ, ರಾಜ್ಯದ ಒಟ್ಟಾರೆ ಅಂತರ್ಜಲ ಬಳಕೆಯು 2024ರಲ್ಲಿದ್ದ ಶೇ.68.44ರಿಂದ 2025ರಲ್ಲಿ ಶೇ.66.49ಕ್ಕೆ ಇಳಿಕೆಯಾಗಿರುವುದು ಕಂಡುಬಂದಿದೆ. ಈ ಸಕಾರಾತ್ಮಕ ಇಳಿಕೆಯು, ರಾಜ್ಯಾದ್ಯಂತ ಲಭ್ಯವಿರುವ ವಾರ್ಷಿಕ ಅಂತರ್ಜಲದಲ್ಲಿ ಸರಾಸರಿ ಶೇ.66.5ರಷ್ಟನ್ನು ಮಾತ್ರ ಪ್ರಸ್ತುತ ಬಳಸಲಾಗುತ್ತಿದೆ ಎಂಬುದನ್ನು ಸೂಚಿಸುತ್ತದೆ. ಅಂತರ್ಜಲದ ಜವಾಬ್ದಾರಿಯುತ ಬಳಕೆಯ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಕರ್ನಾಟಕ ಸರ್ಕಾರದ ಸಣ್ಣ ನೀರಾವರಿ ಇಲಾಖೆಯು ನಿರಂತರವಾಗಿ ನಡೆಸುತ್ತಿರುವ ವ್ಯಾಪಕ ಪ್ರಯತ್ನಗಳು ಈ ಸಾಧನೆಗೆ ಪ್ರಮುಖ ಕಾರಣವಾಗಿದೆ. ಇದರಿಂದಾಗಿ ಸುಸ್ಥಿರ ಬಳಕೆ ಹಾಗೂ ನೈಸರ್ಗಿಕ ಅಂತರ್ಜಲ ಮೂಲಗಳ ಮೇಲಿನ ಒತ್ತಡ ಕ’ಡಿಮೆ’ಯಾಗಿರ’ುವ’ುದ’ು ದೃಢವಾಗುತ್ತದೆ.

ಇದಕ್ಕೆ ಪೂರಕವಾಗಿ, ಕರ್ನಾಟಕದ ಅಂತರ್ಜಲ ಮಟ್ಟದಲ್ಲಿ ಗಣನೀಯ ಸುಧಾರಣೆ ಕಂಡುಬಂದಿದೆ. ಒಟ್ಟು ವಾರ್ಷಿಕ ಅಂತರ್ಜಲ ಮರುಪೂರಣ ಪ್ರಮಾಣವು 2024ರಲ್ಲಿದ್ದ 18.74 ಬಿಲಿಯನ್ ಕ್ಯೂಬಿಕ್ ಮೀಟರ್ () ನಿಂದ 2025ರಲ್ಲಿ 19.28 ಗೆ ಗಮನಾರ್ಹವಾಗಿ ಏರಿಕೆಯಾಗಿದೆ. ಈ ಮರುಪೂರಣ ದರದ ಹೆಚ್ಚಳದ ನೇರ ಪರಿಣಾಮವಾಗಿ, ವಾರ್ಷಿಕ ಲಭ್ಯವಿರುವ ಅಂತರ್ಜಲ ಸಂಪನ್ಮೂಲವೂ 16.88 ನಿಂದ 17.41 ಗೆ ಏರಿಕೆಯಾಗಿದೆ.

ರಾಜ್ಯಾದ್ಯಂತ ಮೂಲ ಸೌಕರ್ಯಗಳಲ್ಲಿ ಮೇಲ್ದರ್ಜೆಗೆ ಏರಿಕೆಯಾಗಿರುವುದು ಈ ಹೆಚ್ಚಳಕ್ಕೆ ಪ್ರಮುಖ ಕಾರಣವಾಗಿದೆ. ಜಲ ಸಂರಕ್ಷಣಾ ರಚನೆಗಳಿಂದ (-) ಆಗುವ ಅಂತರ್ಜಲ ಮರುಪೂರಣವು ರಲ್ಲಿದ್ದ . ರಿಂದ ರಲ್ಲಿ . ಗೆ ಏರಿಕೆಯಾಗಿದ್ದು, ಶೇ..ರಿಂದ ಜಿಗಿತ ಕಂಡಿದೆ. ಕಳೆದ ಒಂದು ವರ್ಷದಲ್ಲಿ ರಾಜ್ಯಾದ್ಯಂತ ಇಂತಹ ಜಲಸಂರಕ್ಷಣಾ ಕಾಮಗಾರಿಗಳ ಸಂಖ್ಯೆ ,, ರಿಂದ ,,ಗೆ ಏರಿಕೆಯಾಗಿರುವುದು ಈ ಸಾಧನೆಗೆ ಪ್ರಮುಖ ಕಾರಣವಾಗಿದೆ.

ಈ ಸಕಾರಾತ್ಮಕ ಬೆಳವಣಿಗೆಗೆ ಕಳೆದ ಸಾಲಿನಲ್ಲಿ ಆದಂತಹ ಉತ್ತಮ ಮಳೆ ಹಾಗೂ ಸರ್ಕಾರದ ದೂರದೃಷ್ಟಿಯ ಯೋಜನೆಗಳು ಪ್ರಮುಖ ಕಾರಣವಾಗಿದೆ. ಅಂತರ್ಜಲ ಬಳಕೆಯಲ್ಲಿ ಗಣನೀಯ ಇಳಿಕೆ ಮತ್ತು ನಮ್ಮ ವಾರ್ಷಿಕ ಮರುಪೂರಣ ಪ್ರಮಾಣದಲ್ಲಿನ ಭಾರಿ ಏರಿಕೆಯು, ಜಲ ಸುಸ್ಥಿರತೆಯ ಕಡೆಗಿನ ನಮ್ಮ ಸರ್ಕಾರದ ಬದ್ಧತೆಗೆ ಸಾಕ್ಷಿಯಾಗಿದೆ ಎಂದು ಸಚಿವರು ತಿಳಿಸಿದರು.

ವೈಜ್ಞಾನಿಕ ಜಲ ನಿರ್ವಹಣೆ, ಕೆರೆಗಳ ಪುನರುಜ್ಜೀವನ ಯೋಜನೆಗಳು ಮತ್ತು ಕರ್ನಾಟಕದಾದ್ಯಂತ ಜಲ ಸಂರಕ್ಷಣಾ ರಚನೆಗಳ ನಿರ್ಮಾಣದ ಮೂಲಕ, ಅಂತರ್ಜಲದ ಮರುಪೂರಣವನ್ನು ಹೆಚ್ಚಿಸಿದ್ದೇವೆ. ಅಲ್ಲದೇ, ಜನಜಾಗೃತಿಯ ಅಭಿಯಾನದ ಮೂಲಕ ಅತಿಯಾದ ಬಳಕೆಯನ್ನು ನಾವು ಯಶಸ್ವಿಯಾಗಿ ತಡೆಯುವಲ್ಲಿ ಯಶಸ್ವಿಯಾಗಿದ್ದೇವೆ. ಇದಲ್ಲದೆ, ನಮ್ಮ ಮಹತ್ವಾಕಾಂಕ್ಷೆಯ ಕೆರೆ ತುಂಬಿಸುವ ಯೋಜನೆಗಳು ಅತ್ಯುತ್ತಮ ಫಲಿತಾಂಶಗಳನ್ನು ನೀಡಿದ್ದು, ಕೆರೆ-ಕುಂಟೆಗಳ ಮೂಲಕ ಆಗುವ ಮರುಪೂರಣ ಶೇ..ರಷ್ಟು ಹೆಚ್ಚಾಗಿದೆ. ಕೇವಲ ದಿನಗಳು (-) ಮಳೆಗಾಲವನ್ನು ನೆಚ್ಚಿಕೊಳ್ಳುವ ಬದಲು, ವರ್ಷದ 365 ದಿನಗಳೂ (365) ಸಂಸ್ಕರಿಸಿದ ಅಥವಾ ಮೇಲ್ಮೈ ನೀರನ್ನು ಒದಗಿಸುವ ಮೂಲಕ ರೈತರು ಮತ್ತು ನಾಗರಿಕರಿಗೆ ನಾವು ದೀರ್ಘಾವಧಿಯ ಜಲ ಭದ್ರತೆಯನ್ನು ನೀಡಿದ್ದೇವೆ ಎಂದು ಹೇಳಿದರು.

ಈ ದೂರದೃಷ್ಟಿಯ ಯೋಜನೆಗಳ ಸಕಾರಾತ್ಮಕ

3ನೇ ಪುಟಕ್ಕೆ

ಕುಡಿಯುವ ನೀರು, ಜಾನುವಾರುಗಳಿಗೆ ಮೇವಿನ ಲಭ್ಯತೆ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ

ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ನೋಡಿಕೊಳ್ಳಿ: ಡಾ.ಶರಣಪ್ರಕಾಶ್

ರಾಯಚೂರು,ಏ.08

ಜಿಲ್ಲೆಯ ಸಾರ್ವಜನಿಕರಿಗೆ ಕುಡಿಯುವ ನೀರಿನ ಪೂರೈಕೆಯಲ್ಲಿ ಯಾವುದೇ ಸಮಸ್ಯೆ ಎದುರಾಗದಂತೆ ಮುನ್ನೆಚ್ಚರಿಕೆ ವಹಿಸುವಂತೆ ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಸೂಚಿಸಿದರು.

ಏಪ್ರಿಲ್ 08ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಕುಡಿಯುವ ನೀರಿನ ಸಮಸ್ಯೆಗಳು ಮತ್ತು ಜಾನುವಾರುಗಳಿಗೆ ಮೇವಿನ ಲಭ್ಯತೆಯ ಕುರಿತು ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಗ್ರಾಮ ಪಂಚಾಯತಿಗಳು, ನಗರ ಸ್ಥಳೀಯ ಸಂಸ್ಥೆಗಳು, ಬೇಸಿಗೆಯಲ್ಲಿ ಕುಡಿಯುವ ನೀರಿನ ಪೂರೈಕೆಗೆ ಹೆಚ್ಚಿನ ಒತ್ತು ನೀಡಬೇಕು. ಯಾವುದೇ ಅಡೆತಡೆ ಇಲ್ಲದೆ ನೀರು ಪೂರೈಸಲು ಗಮನ ಹರಿಸಬೇಕು. ಸ್ಥಳೀಯವಾದ ಸಮಸ್ಯೆಗಳನ್ನು ತಮ್ಮ ಹಂತದಲ್ಲಿ ಪರಿಹರಿಸಿ ಗ್ರಾಮ ಪಂಚಾಯತ್ಗಳು ಮತ್ತು ಸ್ಥಳೀಯ



ಸಂಸ್ಥೆಗಳ ಅನುದಾನ ಬಳಸಿಕೊಂಡು ಕಾಮಗಾರಿ ನಡೆಸಬೇಕು. ಸಾರ್ವಜನಿಕರ ದೂರುಗಳಿಗೆ ತ್ವರಿತವಾಗಿ ಸ್ಪಂದಿಸಬೇಕು ಎಂದು ಅವರು ತಿಳಿಸಿದರು.

ನೀರಿನ ಸಮಸ್ಯೆಗಳಿರುವ ಗ್ರಾಮಗಳ ಪಟ್ಟಿ ಮಾಡಿ, ಕೂಡಲೇ ಆಯಾ ಗ್ರಾಮಗಳಲ್ಲಿರುವ ಕೆರೆಗಳನ್ನು ತುಂಬಿಸಲು ಕ್ರಮ ಕೈಗೊಳ್ಳಬೇಕು. ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿ ಕೊಳ್ಳುವುದು ಆಯಾ ತಾಲೂಕಿನ ತಹಶೀಲ್ದಾರ್, ತಾಲೂಕು ಪಂಚಾಯತ್ ಇಓ ಹಾಗೂ ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಯ ಎಇಇ ಗಳದ್ದಾಗಿರುತ್ತದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಪ್ರತಿಯೊಂದು ತಾಲೂಕು ವ್ಯಾಪ್ತಿಯಲ್ಲಿನ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಗಳಿದ್ದರೆ, ಮತ್ತು ಸಮಸ್ಯೆಗಳನ್ನು ಬಗೆಹರಿಸಿರುವ ಬಗ್ಗೆ ಆಯಾ ಕ್ಷೇತ್ರದ ಶಾಸಕರ ಗಮನಕ್ಕೆ ತರಬೇಕು. ಮತ್ತು ಪ್ರತಿಯೊಂದು ಮಾಹಿತಿಯನ್ನು ಟಾಸ್ಕ್ಫೋರ್ಸ್ ಸಮಿತಿ ಸಭೆಯಲ್ಲಿ ನೀಡಬೇಕು. ಪ್ರಸ್ತುತ ತುಂಗಭದ್ರಾ ಜಲಾಶಯದಲ್ಲಿ 17.26 ಟಿಎಂಸಿ ನೀರು ಸಂಗ್ರಹವಿದ್ದು, ಜೊತೆಗೆ 200 ಕ್ಯೂಸೆಕ್ ನೀರು ಒಳಹರಿವು ಇದ್ದು, ಸಿಂಧನೂರು ಮಾನ್ವಿ ಹಾಗೂ ರಾಯಚೂರು ತಾಲೂಕಿನ ಗ್ರಾಮಗಳಿಗೆ ಸಮರ್ಪಕ ನೀರು ಒದಗಿಸಬಹುದಾಗಿದೆ. ಜಲಾಶಯ ದಲ್ಲಿ ನೀರಿದ್ದು, ಜಿಲ್ಲೆಯಲ್ಲಿ ಕುಡಿಯುವ ನೀರಿನ ಕೆರೆಗಳನ್ನು ತುಂಬಿಸಲು ಕ್ರಮ ಕೈಗೊಳ್ಳಬೇಕು ಎಂದರು.

3ನೇ ಪುಟಕ್ಕೆ

ಭೂಮಿ ಪೂಜೆ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಚಾಲನೆ

ರಾಯಚೂರು,ಏ.08 -

2025-26ನೇ ಸಾಲಿನ ರಾಜ್ಯ ಹಣಕಾಸು ಆಯೋಗ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯತ್ ಅನಿರ್ಬಂಧಿತ ಯೋಜನೆಯಡಿ ವಿಕಲಚೇತನರಿಗೆ ಮೀಸಲಿಟ್ಟ ಅನುದಾನದಡಿ ವಿಕಲಚ’ೀತ’ನ’ರ’



ಪುನರ್ವಸತಿ ಕೇಂದ್ರ ಕಟ್ಟಡ ನಿರ್ಮಾಣದ ಭೂಮಿ ಪೂಜೆ ಕಾರ್ಯಕ್ರಮಕ್ಕೆ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರು ಆಗಿರುವ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಬುಧವಾರ ದಂದು ನಗರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಆವರಣದಲ್ಲಿ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಕರ್ನಾಟಕ ಪರಿಶಿಷ್ಟ ಪ’ಂಗ’ಡ’ಗ’ಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷ’ೀತ’್ರ’ದ’ ಶಾಸ’ಕ’ರಾದ’ ಬಸ’ನ’ಗೌಡ’ ದದ್ದಲ್, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ

3ನೇ ಪುಟಕ್ಕೆ

ರೈತರು ಯೂರಿಯಾ ರಸ ಗೊಬ್ಬರ ಖರೀದಿಸಲು

ಎಫ್.ಐ.ಡಿ ಸಂಖ್ಯೆ ಕಡ್ಡಾಯ: ಕೃಷಿ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ

ರಾಯಚೂರು ಏ.08

ಪ್ರಸ್ತುತ ಮುಂಗಾರು ಹಂಗಾಮಿನಿದ ರೈತರು ಯೂರಿಯಾ ರಸಗೊಬ್ಬರ ಖರೀದಿ ಮಾಡಲು ಕೃಷಿ ಇಲಾಖೆಯು ಅಭಿವೃದ್ಧಿಪಡಿಸಿರುವ ಹೊಸ ಕೆ-ಕಿಸಾನ್ ತಂತ್ರಾಂಶದ ಮೂಲಕವೇ ರೈತರ ಎಫ್.ಐ.ಡಿ. ಸಂಖ್ಯೆ ಮತ್ತು ಆಧಾರ ಕಾರ್ಡ್ ಬಳಸಿಕೊಂಡು ರೈತರು ಹೊಂದಿರುವ ಜಮೀನಿನ ವಿಸ್ತೀರ್ಣ ಮತ್ತು ಬೆಳೆದ ಬೆಳೆಗೆ ಅನುಗುಣವಾಗಿ ಎಷ್ಟು ಪ್ರಮಾಣದ ಯೂರಿಯಾ ಅಗತ್ಯವಿದೆಯೋ ಅಷ್ಟನ್ನು ಮಾತ್ರ ರೈತರು ಖರೀಧಿಸಲು ಹಾಗೂ ರಸಗೊಬ್ಬರ ಮಾರಾಟಗಾರರು ರೈತರಿಗೆ ವಿತರಿಸಲು ಅವಕಾಶವಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಕಾಶ್ ಚೌವ್ಹಾಣ ಅವರು ತಿಳಿಸಿದ್ದಾರೆ.

ಇಲಾಖೆಯ ಕೆ-ಕಿಸಾನ್ ತಂತ್ರಾಂಶದ ಮೂಲಕವೇ ಎಫ್.ಐ.ಡಿ ದಾಖಲಿಸಿ ಯೂರಿಯಾ ರಸಗೊಬ್ಬರ ವಿತರಿಸಬೇಕು. ಎಫ್.ಐ.ಡಿ. ಹೊಂದಿಲ್ಲದ ರೈತರು ತಕ್ಷಣವೇ ತಮ್ಮ ಪಹಣಿ, ಬ್ಯಾಂಕ್ ಪಾಸ್‌ಬುಕ್ ಮತ್ತು ಆಧಾರ್ ಕಾರ್ಡ್ ದಾಖಲೆಗಳೊಂದಿಗೆ ಸಮೀಪದ ರೈತ ಸಂಪರ್ಕ ಕೇಂದ್ರ, ತೋಟಗಾರಿಕೆ ಇಲಾಖೆ, ಕಂದಾಯ ಇಲಾಖೆ, ಗ್ರಾಮ ಒನ್, ಸಾಮಾನ್ಯ ಸೇವಾ ಕೇಂದ್ರಗಳಿಗೆ ಭೇಟಿ ನೀಡಿ ಎಫ್.ಐ.ಡಿ. ಸೃಜಿಸಿಕೊಳ್ಳಬೇಕು. ಈಗಾಗಲೇ ಎಫ್.ಐ.ಡಿ. ಹೊಂದಿರುವ ರೈತರು ತಮ್ಮ ಎಲ್ಲ ಸರ್ವೇ ನಂಬರ್‌ಗಳನ್ನು ಅದಕ್ಕೆ ಜೋಡಣೆ ಮಾಡಬೇಕು.

ರೈತರ ನೋಂದಣಿ ಮತ್ತು ಫಲಾನುಭವಿ ಮಾಹಿತಿ ವ್ಯವಸ್ಥೆ ಮೂಲಕ ರೈತರ ವೈಯಕ್ತಿಕ ವಿವರ, ಭೂಮಿ ವಿವರ, ಬ್ಯಾಂಕ್ ಖಾತೆ, ಆಧಾರ್ ಸಂಖ್ಯೆಯ ಮಾಹಿತಿಯನ್ನೊಳಗೊಂಡ ಎಫ್.ಐ.ಡಿ ಅನ್ವಯ ರೈತರ ಜಮೀನಿನ ವಿಸ್ತೀರ್ಣ ಹಾಗೂ ಬೆಳೆಗೆ ತಕ್ಕಂತೆ ಯೂರಿಯಾ ಪ್ರಮಾಣ ಅಗತ್ಯ ಇರುವಷ್ಟು ಮಾತ್ರ ವಿತರಿಸಲು ಕ್ರಮ ಕೈಗೊಳ್ಳಲಾಗಿದೆ. ರೈತರಲ್ಲದವರು ಆಧಾರ್ ಬಳಸಿ / ಬೇರೆ ರೈತರ ಎಫ್. ಐ.ಡಿ ಬಳಸಿ ರಸಗೊಬ್ಬರ ಖರೀದಿಸಿ ಸಂಗ್ರಹಿಸಿ ಕೃತಕ ಅಭಾವ ಸೃಷ್ಟಿ ಮಾಡುವ ಪ್ರಕರಣ ಕೃಷಿಯೇತರ ಚಟುವಟಿಕೆಗಳಿಗೆ ರಸಗೊಬ್ಬರ ಬಳಕೆ ಮಾಡುವಂತ ಪ್ರಕರಣ, ಹೆಚ್ಚಿನ ಬೆಲೆಗೆ ಮಾರಾಟ ಮಾಡುವುದು, ಕಾಳಸಂತೆಯಲ್ಲಿ ಮಾರಾಟ ಮಾಡುವುದು ಕಂಡು ಬಂದರೆ ಸೂಕ್ತ ಕಾನೂನು ಕ್ರಮ ಜರುಗಿಸಲಾಗುವುದು. ರಸಗೊಬ್ಬರಗಳನ್ನು ಹೆಚ್ಚಿನ ಬೆಲೆಗೆ ಮಾರಾಟ,


3ನೇ ಪುಟಕ್ಕೆ

ಅಪರಿಚಿತ ಶವ ಪತ್ತೆ

ಸಿರವಾರ.ಏ7-

ವಾಹನ ಅಪಘಾತದಲ್ಲಿ ಮೃತ ಪಟ್ಟಿರುವ ಅಪರಿಚಿತ ವ್ಯಕ್ತಿಯ ವಾರಸುದಾರರ ಪತ್ತೆಗಾಗಿ ಪೊಲೀಸ್ ಪ್ರಕಟಿಸಿದ್ದಾರೆ.

ರಾಯಚೂರು ಜಿಲ್ಲೆಯ ಸಿರವಾರ ಪೊಲೀಸ್ ಠಾಣೆಯ ವ್ಯಾಪ್ತಿ ಯಲ್ಲಿರುವ ಕಲ್ಲೂರು ಗ್ರಾಮ ದಲ್ಲಿ ರಾಯಚೂರು- ಮಾನವಿ ಮುಖ್ಯ ರಸ್ತೆಯಲ್ಲಿ ದಿ.06 ರಂದು ಅಪರಿಚಿತ ವ್ಯಕ್ತಿಗೆ ಅಪರಿಚಿತ ವಾಹನ ಅಪಘಾತ ಮಾಡಿ ಹೋಗಿದ್ದರಿಂದ ತೀವ್ರ ಸ್ವರೂಪದ ಗಾಯ ಗೊಂಡ ಅಪರಿಚಿತ ವ್ಯಕ್ತಿ ಸ್ಥಳದ ಲ್ಲಿಯೇ ಮೃತಪಟ್ಟಿದ್ದು ಮೃತನ ಶವವನ್ನು ವಾರಸುದಾರರ ಪತ್ತೆಗಾಗಿ ರಾಯಚೂರು ರಿಮ್ಸ್ ಆಸ್ಪತ್ರೆಯ ಶವಗಾರ ಕೋಣೆಯಲ್ಲಿ ಕಾಯ್ದಿರಿಸಿದ್ದು ಮೃತನ ಬಗ್ಗೆ ಸುಳಿವು ಸಿಕ್ಕಲ್ಲಿ ಸಿರವಾರ ಪೊಲೀಸ್ ಠಾಣೆಗೆ ಹೆಚ್ಚಿನ ಮಾಹಿತಿಗಾಗಿ 9480803 866, 9480803837, 948080 3800. ಸಂಪರ್ಕಿಸಲು ಈ ಪೊಲೀಸ್ ಪ್ರಕಟಣೆಯ ಮೂಲಕ ಕೋರಲಾಗಿದೆ.



ಅದ್ದೂರಿಯಾಗಿ ಜರುಗಿದ ಹರವಿ ಬಸವೇಶ್ವರ ರಥೋತ್ಸವ

ಸಿರವಾರ .ಏ.09.

ತಾಲೂಕಿನ ಹರವಿ ಬಸವೇಶ್ವರ ಜಾತ್ರ ಮಹೋತ್ಸವದ ಅಂಗವಾಗಿ ಮಂಗಳವಾರ ರಥೋತ್ಸವವು ಅದ್ದೂರಿಯಾಗಿ ಜರುಗಿತು.

ಬೆಳಗ್ಗೆಯಿಂದ ದೇವಸ್ಥಾನದಲ್ಲಿ ವಿಶೇಷ ಪೂಜೆ, ಕೈಕಂರ್ಯಗಳು ನಡೆದವು. ಸಾಯಂಕಾಲ ಪಲ್ಲಕ್ಕಿ ಮಹೋತ್ಸವದ ನಂತರ ಸಾವಿರಾರೂ ಭಕ್ತಾಧಿಗಳ ಮಧ್ಯೆ ರಥೋತ್ಸವವು ವಿಜೃಂಭಣೆಯಿಂದ ನಡೆಯಿತು.

ಜಾತ್ರಾ ಮಹೋತ್ಸವದ ಸಾನಿಧ್ಯವನ್ನು ಮಾನ್ವಿ-ಹರವಿ ಕಲ್ಮಠದ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ವಹಿಸಿದ್ದರು.

ವಿಶ್ವ ಆರೋಗ್ಯ ದಿನ ಆಚರಣೆ: ಜನರು ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು: ಡಾ.ಸುರೇಂದ್ರ ಬಾಬು

ರಾಯಚೂರು ಏ.08-

ಜನರಿಗೆ ಕಾಲಕ್ಕೆ ಅನುಗುಣವಾಗಿ ಆರೋಗ್ಯ ಮಾಹಿತಿ ನೀಡುವ ಉದ್ದೇಶದಿಂದ ಮತ್ತು ಜನರು ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕೆಂಬ ಸದುದ್ದೇಶದಿಂದ ಈ ದಿನವನ್ನು ವಿಶ್ವ ಆರೋಗ್ಯ ದಿನವನ್ನಾಗಿ 1948ರಿಂದ ಆಚರಿಸಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ಸುರೇಂದ್ರ ಬಾಬು ಅವರು ಹೇಳಿದರು.

ಏಪ್ರಿಲ್ 07ರ ಮಂಗಳವಾರ ದಂದು ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಾರ್ಯಾಲಯದ ಕೃಷ್ಣ ಸಭಾಂಗಣದಲ್ಲಿ ಜಿಲ್ಲಾಡಳಿತ,



ಜಿಲ್ಲಾ ಪಂಚಾಯತ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ವಿಶ್ವ ಆರೋಗ್ಯ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಮನುಷ್ಯನ ಜೀವನ ಶೈಲಿಯಲ್ಲಿ ಬದಲಾವಣೆ ಕಂಡುಬದಿದ್ದು, ತಿನ್ನುವ ಆಹಾರ, ತೊಡುವ ಬಟ್ಟೆ ಎಲ್ಲವು ಬದಲಾವಣೆಯಾಗಿದೆ. ಈ ವರ್ಷದ ಘೋಷವಾಕ್ಯ ಆರೋಗ್ಯಕ್ಕಾಗಿ ಒಟ್ಟಾಗಿ ವಿಜ್ಞಾನದೊಂದಿಗೆ ನಿಲ್ಲು ಎಂಬ ಸಂದೇಶದೊದಿಗೆ ಗ್ರಾಮೀಣ ಭಾಗದಲ್ಲಿ ಜೀವನ ಶೈಲಿಯಲ್ಲಿ ಬದಲಾವಣೆ ತರಲು, ಸಮುದಾಯದಲ್ಲಿ ಜಾಗೃತಿಗೊಳಿಸಲು ಆರೋಗ್ಯ ಇಲಾಖೆ ಸದಾ ಕಾರ್ಯೋನ್ಮುಖವಾಗಬೇಕು ಎಂದರು.

ವೈಜ್ಞಾನಿಕ ತಳಹದಿಯ ಮೇಲೆ ಇಂದಿನ ದಿನಮಾನಗಳಲ್ಲಿ ಕಂಡು ಬರುತ್ತಿರುವ ರೋಗರುಜಿನಗಳ ಕುರಿತು ನಿಖರವಾದ ಮಾಹಿತಿಯನ್ನು ಜನತೆಗೆ ತಲುಪಿಸುವ ಮೂಲಕ ರೋಗ ಹರಡುವಿಕೆಯ ಮಾರ್ಗ ಗಳನ್ನು ತಡೆಗಟ್ಟಲು ಎಲ್ಲರೂ ಶ್ರಮಿಸೋಣವೆಂದರು.

ಸಶೋಧನೆ-ಚಾಲಿತ ನೀತಿಗಳು ಮತ್ತು ಅಂತರರಾಷ್ಟಿಯ ತಂಡದ ಕೆಲಸದ ಮೇಲೆ ಕೇಂದ್ರೀಕರಿಸುವ ಮೂಲಕ, ಗುಣಮಟ್ಟದ ಆರೋಗ್ಯ ರಕ್ಷಣೆಯನ್ನು ಎಲ್ಲೆಡೆ ಎಲ್ಲರಿಗೂ ಪ್ರವೇಶಿಸುವಂತೆ ಮಾಡುವ ಗುರಿಯನ್ನು ಹೊಂದಿದೆ. ಈ

3ನೇ ಪುಟಕ್ಕೆ

ತೆರಿಗೆ ಸಂಗ್ರಹಣೆಯಲ್ಲಿ ಶೇ.100 ರಷ್ಟು ಸಾಧನೆ: ರಾಯಚೂರಿನ ಜಿ.ಪಂ.ಸಿಇಒ

ಈಶ್ವರ ಕುಮಾರ್ ಅವರಿಗೆ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಂದ ಪ್ರಶಂಸೆ ಪತ್ರ

ರಾಯಚೂರು ಏ.08-

ಜಿಲ್ಲೆಯ ವಿವಿಧ ಗ್ರಾಮ ಪಂಚಾಯತಿಗಳಿದ 2025-26ನೇ ಸಾಲಿನಲ್ಲಿ ಶೇ.100ರಷ್ಟು ತೆರಿಗೆ ಸಂಗ್ರಹಣೆಯ ಗುರಿಯನ್ನು ಸಾಧಿಸಿರುವುದು ಅತ್ಯಂತ ಸಂತೋಷದ ಸಂಗತಿಯಾಗಿದೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಅವರು ರಾಯಚೂರಿನ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರಿಗೆ ಪ್ರಶಂಸಾ ಪತ್ರ ಬರೆದು ಅಭಿನಂದನೆ ತಿಳಿಸಿದ್ದಾರೆ.

ಈ ಸಾಧನೆಗೆ ಶ್ರಮಿಸಿದ ಜಿಲ್ಲೆಯ



ಗ್ರಾಮ ಪಂಚಾಯಿತಿಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಪರಿಶ್ರಮ ಮತ್ತು ಕಾರ್ಯನಿಷ್ಠೆಯನ್ನು ಪ್ರಶಂಸಿಸುತ್ತೇನೆ. ಈ ಸಾಧನೆ ವ್ಯವಸ್ಥಿತವಾದ ಯೋಜನೆ, ಪರಿಣಾಮಕಾರಿ ಸಮನ್ವಯ ಹಾಗೂ ನಿರಂತರ ಪರಿಶ್ರಮದ ಫಲವಾಗಿದ್ದು, ಇತರೆ ಜಿಲ್ಲೆಗಳಿಗೆ ಮಾದರಿಯಾಗಿದೆ. ಈ ಮಹತ್ವದ ಸಾಧನೆಗೆ ನೇತೃತ್ವ ನೀಡಿದ ನಿಮಗೆ ಮತ್ತು ತಾಲ್ಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿಗಳ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರಿಗೆ ಹಾರ್ದಿಕ ಅಭಿನಂದನೆಗಳನ್ನು ತಿಳಿಸಲು ಹರ್ಷಿಸುತ್ತೇನೆ. ಈ ಸಾಧನೆಯನ್ನು ಸ್ಥಿರಪಡಿಸಿಕೊಳ್ಳುವುದರ ಜೊತೆಗೆ ಇನ್ನಷ್ಟು ಉತ್ತಮ ಫಲಿತಾಂಶಗಳನ್ನು ಸಾಧಿಸುತ್ತೀರೆಂದು ಆಶಿಸುತ್ತೇನೆ ಎಂದು ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಡಾ.ಶಾಲಿನಿ ರಜನೀಶ್ ಅವರು ಪ್ರಶಂಸಾ ಪತ್ರದಲ್ಲಿ ತಿಳಿಸಿದ್ದಾರೆ.

ಸಾಹಿತ್ಯ ಕ್ಷೇತ್ರಕ್ಕೆ ಹೊಸದೊಂದನ್ನು ಕಟ್ಟಿಕೊಡಲು ಅಧ್ಯಯನ ಸಾಧ್ಯ: ಪ್ರೊ.ಎಚ್.ಟಿ.ಪೋತೆ

ಕಲಬುರಗಿ,ಏ.08–

ಲೇಖಕರಾದವರು ಅಧ್ಯಯನದ ಕಡೆಗೆ ಗಮನ ಕೊಟ್ಟಾಗ ಮಾತ್ರ ಸಾಹಿತ್ಯ ಕ್ಷೇತ್ರಕ್ಕೆ ಹೊಸದೊಂದನ್ನು ಕಟ್ಟಿಕೊಡಲು ಸಾಧ್ಯವಿದೆ. ಪ್ರಜ್ಞಾವಂತ ಲೇಖಕರು ಸಾಹಿತ್ಯ ಆಸಕ್ತಿವಹಿಸದಿರುವುದು ವಿಪರ್ಯಾಸ ಎಂದು ಗುಲ್ಬರ್ಗಾ ವಿಶ್ವವಿದ್ಯಾಲಯದ ಕಲಾ ನಿಕಾಯದ ಡೀನ್ ಹಾಗೂ ಕನ್ನಡ ಅಧ್ಯಯನ ಸಂಸ್ಥೆ ನಿರ್ದೇಶಕ ಪ್ರೊ.ಎಚ್.ಟಿ.ಪೋತೆ ಅಭಿಪ್ರಾಯಪಟ್ಟರು.

ಕಲಬುರಗಿಯ ದೃಶ್ಯ ಬೆಳಕು ಸಾಂಸ್ಕೃತಿಕ ಸಂಸ್ಥೆ, ಗುಲ್ಬರ್ಗಾ ವಿಶ್ವವಿದ್ಯಾಲಯದ ಕನ್ನಡ ಅಧ್ಯಯನ ಸಂಸ್ಥೆ ಹಾಗೂ ಬೆಂಗಳೂರು ಸಂಸ ಥಿಯೇಟರ್ ಸಹಯೋಗದಲ್ಲಿ ಹರಿಹರ ಸಭಾಂಗಣದಲ್ಲಿ ಶಾಂತರಸರ 101ನೇ ಜನ್ಮ ದಿನಾಚರಣೆ ಅಂಗವಾಗಿ ಆಯೋಜಿಸಿದ ಶಾಂತರಸರ ನೆನಪು ವಿಶೇಷ ಉಪನ್ಯಾಸ ಕಾರ್ಯಕ್ರಮ ದಲ್ಲಿ ಮಾತನಾಡಿ, ಈ ನೆಲದ ಶರಣರು, ಸೂಫಿಗಳು, ದಾಸರು, ತತ್ವಪದಕಾರರು, ಬಂಡಾಯ. ವೈಚಾರಿಕ ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರವನ್ನು ಶ್ರೀಮಂತಗೊಳಿಸಿದ್ದಾರೆ. ಪ್ರಜ್ಞಾವಂತ ಯುವ ಲೇಖಕರು ಓದುವ ನಿರಾಸಕ್ತಿ ಬೆಳೆಸಿಕೊಂಡಿರುವುದು ವಿಪರ್ಯಾಸ ಎಂದರು.

ಹೊಸ ತಲೆಮಾರಿನ ಲೇಖಕರು ಮತ್ತು ವಿದ್ಯಾರ್ಥಿಗಳು ಕಾಲದ ಅನಿವರ್ಯತೆ ಮತ್ತು ಭವಿಷ್ಯದ ಹಿನ್ನೆಲೆಯಲ್ಲಿ ಶಾಂತರಸರ ಸಾಹಿತ್ಯ ಅಧ್ಯಯನದಿಂದ ಸಾಹಿತ್ಯದ ಗಟ್ಟಿತನ ಮತ್ತು ಸಾಹಿತ್ಯ ಪರಂಪರೆ ಉಳಿಸಿ ಬೆಳೆಸಲು ಸಾಧ್ಯವಾಗುತ್ತದೆ ಎಂದರು.



ವಿಶೇಷ ಉಪನ್ಯಾಸ ನೀಡಿದ ಲೇಖಕ ಹಾಗೂ ಪತ್ರಕರ್ತ ಮಹಿಪಾಲರೆಡ್ಡಿ ಮುನ್ನೂರು, ಪ್ರಯೋಗಶೀಲ ಸಾಹಿತ್ಯ ಬೆಳವಣಿಗೆಗೆ ಶಾಂತರಸರ ಕೊಡುಗೆ ಅಪಾರವಿದೆ. ಪರ್ಷಿಯನ್, ಅರೇಬಿಕ್ ಮತ್ತು ಉರ್ದು ಭಾಷೆಯ ಗಜಲ್‌ಗಳನ್ನು ಅನುವಾದಿಸಿ ಕನ್ನಡಕ್ಕೆ ತಂದು ಅನೇಕ ಬರಹಗಾರರನ್ನು ಬೆಳೆಸಿದ ಹಿರಿಮೆ ಅವರದ್ದು. ಶಾಂತರಸರು ಬದುಕಿರುವರೆಗೂ ಬರೆದರು ಮತ್ತು ಬರೆದಂತೆ ಬದುಕಿದರು. ಶಾಂತರಸರು ವೀರಣ್ಣಗೌಡ ನೀರಮಾನ್ವಿ, ಚೆನ್ನಬಸಪ್ಪ ಬೆಟ್ಟದೂರ ಮುಂತಾದ ಬರಹಗಾರರನ್ನು ಸಂಘಟಿಸಿ ಕಲ್ಯಾಣ ಕರ್ನಾಟಕದ ಸಾಹಿತ್ಯ ಚರಿತ್ರೆ ಮತ್ತು ಸಾಂಸ್ಕೃತಿಕ ಕ್ಷೇತ್ರವನ್ನು ಬೆಳೆಸಿದ್ದಾರೆ. ಮದುವೆ, ಪುರಾಣ, ಜಯಂತಿ, ಹಬ್ಬದಂಥ ಸಂದರ್ಭಗಳಲ್ಲಿ ಸಾಹಿತ್ಯ ಮತ್ತು ಸಾಂಸ್ಕೃತಿಕ ಉತ್ಸವಗಳನ್ನು ಆಚರಿಸಿ ದುಂದುವೆಚ್ಚ ಮಾಡುವ ಶ್ರೀಮಂತರ ಮನವೊಲಿಸಿ ಮದುವೆಯ ನೆನಪಿಗೆ ಗ್ರಂಥಗಳನ್ನು ಪ್ರಕಟಿಸಿ ಬಿಡುಗಡೆ ಮಾಡಿಸುತ್ತಿದ್ದರು ಎಂದರು.

ಕವಿಗೋಷ್ಠಿ, ವಿಚಾರಸಂಕಿರಣ, ಸಂಗೀತಮೇಳಗಳನ್ನು ನಡೆಸುತ್ತಿದ್ದರು. ಸ್ಥಳೀಯ ಕಲಾವಿದರು ಮತ್ತು ಸಂಘಟನೆಗಳಿಂದ ನಾಟಕ ಪ್ರದರ್ಶನ, ಹೆಸರಾಂತ ಸಾಹಿತಿಗಳನ್ನು ಆಹ್ವಾನಿಸಿ ಭಾಷಣ ಮಾಡಿಸಿ ಸಾಕಷ್ಟು ಸಾಹಿತಿಗಳು, ಬರಹಗಾರರು ಮತ್ತು ಸಂಗೀತಗಾರರನ್ನು ಬೆಳೆಸಿದ್ದಾರೆ.

ಹೈದರಾಬಾದ್ ಕರ್ನಾಟಕದ ಒಂದು ಇಡೀ ತಲೆಮಾರಿನ ಕನ್ನಡ ಲೇಖಕರಿಗೆ ಮಾದರಿಯಾಗಿದ್ದ ಶಾಂತರಸರು ತಮ್ಮನ್ನು ಬೆಳಸಿದ ಲೇಖಕರು, ತಮ್ಮ ಪ್ರದೇಶದ ಬಗ್ಗೆ, ಬದುಕಿನ ಬಗ್ಗೆ ಅಪಾರವಾದ ಪ್ರೀತಿ, ವ್ಯಾಮೋಹ ಬೆಳೆಸಿಕೊಂಡಿದ್ದರು. ಬೆನ್ನ ಹಿಂದಿನ ಬೆಳಕು' ಎಂಬ ಸಂಕಲವನ್ನು ರೂಪಿಸಿ ಕಲ್ಯಾಣ ಕರ್ನಾಟಕದ ಕವಿಗಳು ಮತ್ತು ಬರಹಗಾರರನ್ನು ಕನ್ನಡದ ಓದುಗರಿಗೆ ಪರಿಚಯಿಸಿದರು ಎಂದು ತಿಳಿಸಿದರು.

ಮಾನಸಗಳ್ಳಿ, ಬಯಲು ಸೀಮೆಯ ಬಿಸಿಲು, ಕನ್ನಡ ಗಜಲ್ ಕವನ ಸಂಕಲನ, ತೋರಣ ಹರಿಯಲಿಲ್ಲ, ಬಡೇಸಾಬ ಪುರಾಣ, ನಾಯಿ ಮತ್ತು ಪಿಂಚಣಿ, ಸ್ವಾತಂತ್ರ್ಯ ವೀರ, ಉರಿದ ಬದುಕು, ಕಥಾ ಸಂಕಲನ, ಸಣ್ಣ ಗೌಡಸಾನಿ ಕಾದಂಬರಿ ರಚಿಸಿ ಸಾಹಿತ್ಯ ಕ್ಷೇತ್ರವನ್ನು ಪೋಷಿಸಿದರು. ಹಲವಾರು ನಾಟಕಗಳು, ವ್ಯಕ್ತಿ ಜೀವನ ಚರಿತ್ರೆ, ಪ್ರಬಂಧ, ಸಂಶೋಧನೆ, ಸಂಪಾದನೆ ಮತ್ತು ಅನುವಾದ ಕೃತಿಗಳನ್ನು ರಚಿಸಿದ್ದಾರೆ ಎಂದು ವಿವರಿಸಿದರು. ದೃಶ್ಯ ಸಾಂಸ್ಕೃತಿಕ ಸಂಸ್ಥೆ ಅಧ್ಯಕ್ಷ ಡಾ.ಪರಶುರಾಮ ಪಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಶಾಂತರಸರ ಪುತ್ರ ಬಸವಪ್ರಭು ಮಾತನಾಡಿದರು. ಕನ್ನಡ ಅಧ್ಯಯನ ಸಂಸ್ಥೆ ಸಂದರ್ಶಕ ಪ್ರಾಧ್ಯಾಪಕರಾದ ಡಾ. ಶ್ರೀಶೈಲ ನಾಗರಾಳ, ಡಾ. ಸೂರ್ಯಕಾಂತ್ ಸುಜ್ಯಾತ, ಕನ್ನಡ ಅಧ್ಯಯನ ಸಂಸ್ಥೆಯ ಅತಿಥಿ ಉಪನ್ಯಾಸಕರು, ಸಂಶೋಧನಾ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು, ವಿವಿಧ ವಿಭಾಗಗಳ ಅತಿಥಿ ಉಪನ್ಯಾಸಕರು, ಸಂಶೋಧನಾ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿಗಳು ಭಾಗವಹಿಸಿದ್ದರು. ಕಾರ್ಯಕ್ರಮ ಸಂಚಾಲಕ ಡಾ. ಎಂ. ಬಿ. ಕಟ್ಟಿ ಅತಿಥಿ ಗಣ್ಯರನ್ನು ಸ್ವಾಗತಿಸಿದರು. ಡಾ. ಸುನೀತಾ ಜಳಕಿಕರ್ ಪ್ರಾರ್ಥಿಸಿದರು. ಡಾ. ಶಿವಶರಣಪ್ಪ ಕೂಡ್ಲಿ ಕಾರ್ಯಕ್ರಮ ನಿರ್ವಹಿಸಿದರು. ಬಸವರಾಜ ಮಠಪತಿ ವಂದಿಸಿದರು.



ಬಳ್ಳಾರಿಗೆ ಡಿಜಿಪಿ ಡಾ.ಎಂ.ಎ. ಸಲೀಂ ಭೇಟಿ, ಅಧಿಕಾರಿಗಳೊಂದಿಗೆ ಸಭೆ :ಭ್ರಷ್ಟಾಚಾರ ಮುಕ್ತ ಸೇವೆಗೆ ಕರೆ

ಬಳ್ಳಾರಿ,ಏ.08–

ಸಾರ್ವಜನಿಕರೊಂದಿಗೆ ಸ್ನೇಹಪರವಾಗಿದ್ದುಕೊಂಡು, ಭ್ರಷ್ಟಾಚಾರ ಮುಕ್ತ ಮತ್ತು ನಿಷ್ಪಕ್ಷಪಾತವಾಗಿ ಕರ್ತವ್ಯ ನಿರ್ವಹಿಸುವಂತೆ ರಾಜ್ಯ ಪೊಲೀಸ್ ಮಹಾನಿರ್ದೇಶಕರು (ಡಿಜಿಪಿ) ಹಾಗೂ ಮಹಾನಿರೀಕ್ಷಕರಾದ ಡಾ.ಎಂ.ಎ. ಸಲೀಂ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾ ಪೊಲೀಸ್ ಕಚೇರಿಯ ಸಭಾಂಗಣದಲ್ಲಿ ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ವಿಮರ್ಶನಾ ಸಭೆ ನಡೆಸಿ ಅವರು ಮಾತನಾಡಿದರು.

ಇಲಾಖೆಗೆ ಹೊಸದಾಗಿ ಸೇರ್ಪಡೆಯಾಗುತ್ತಿರುವ ಕಿರಿಯ ಅಧಿಕಾರಿಗಳಿಗೆ ಹಿರಿಯರು ತಮ್ಮ ಅನುಭವಗಳನ್ನು ಹಂಚಿಕೊಳ್ಳುವ ಮೂಲಕ ಅವರ ವೃತ್ತಿ ಕೌಶಲ್ಯವನ್ನು ಹೆಚ್ಚಿಸಬೇಕು ಎಂದು ಕಿವಿಮಾತು ಹೇಳಿದರು.

ಆಧುನಿಕ ಕಾಲಘಟ್ಟದಲ್ಲಿ ಅಪರಾಧ ತಡೆಗೆ ತಂತ್ರಜ್ಞಾನದ ಪಾತ್ರ ದೊಡ್ಡದಿದೆ. ಪೊಲೀಸ್ ವ್ಯವಸ್ಥೆಯಲ್ಲಿ ಅಳವಡಿಸಲಾಗಿರುವ ಅತ್ಯಾಧುನಿಕ ತಂತ್ರಜ್ಞಾನದ ಕುರಿತು ಸಿಬ್ಬಂದಿಗಳು ಸೂಕ್ತ ತರಬೇತಿ ಪಡೆಯಬೇಕು. ಪ್ರಕರಣಗಳ ತನಿಖೆಯಲ್ಲಿ ಈ ತಂತ್ರಜ್ಞಾನವನ್ನು ಸಮರ್ಪಕವಾಗಿ ಬಳಸಿಕೊಳ್ಳುವ ಮೂಲಕ ಕಾನೂನು ಸುವ್ಯವಸ್ಥೆಯನ್ನು ಕಾಪಾಡಬೇಕು ಎಂದು ಅವರು ನಿರ್ದೇಶನ ನೀಡಿದರು.

★ಪೊಲೀಸ್ ವಸತಿ ಗೃಹಗಳಿಗೆ ಭೇಟಿ:★

ಸಭೆಯ ನಂತರ ರಾಜ್ಯ ಪೊಲೀಸ್ ಮಹಾನಿರ್ದೇಶಕರು (ಡಿಜಿಪಿ) ಹಾಗೂ ಮಹಾನಿರೀಕ್ಷಕರಾದ ಡಾ.ಎಂ.ಎ. ಸಲೀಂ ಅವರು ಡಿ.ಎ.ಆರ್ ಪೊಲೀಸ್ ವಸತಿ ಗೃಹಗಳ ಸಂಕೀರ್ಣಕ್ಕೆ ಭೇಟಿ ನೀಡಿ, ಅಲ್ಲಿ ವಾಸಿಸುತ್ತಿರುವ ಅಧಿಕಾರಿಗಳು ಹಾಗೂ ಸಿಬ್ಬಂದಿ ಕುಟುಂಬದವರ ಕುಂದುಕೊರತೆಗಳನ್ನು ಆಲಿಸಿದರು. ಇದಾದ ಬಳಿಕ ಬಳ್ಳಾರಿ ನಗರದ ಬ್ರೂಸ್‌ಪೇಟೆ ಪೊಲೀಸ್ ಠಾಣೆಗೂ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಈ ವೇಳೆ ಬಳ್ಳಾರಿ ವಲಯ ಪೊಲೀಸ್ ಉಪ ಮಹಾನಿರೀಕ್ಷಕರಾದ ಡಾ.ಹರ್ಷ, ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಡಾ.ಸುಮನ್ ಡಿ.ಪೆನ್ನೇರ್ಕ,ರ್ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ನವೀನ್ ಕುಮಾರ್ ಸೇರಿದಂತೆ ಡಿಎಸ್‌ಪಿ ಅಧಿಕಾರಿಗಳು ಹಾಗೂ ಇತರೆ ಪೊಲೀಸ್ ಅಧಿಕಾರಿಗಳು ಉಪಸ್ಥಿತರಿದ್ದರು.

ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ಕುಸುಬೆ ಖರೀದಿ : ಬಿ.ಫೌಝಿಯಾ ತರನ್ನುಮ್

ಕಲಬುರಗಿ,ಏ.08–

2026ನೇ ಸಾಲಿನಲ್ಲಿ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಕುಸುಬೆ ಖರೀದಿಸಲು 2026ರ ಏ.4 ರಂದು ರಾಜ್ಯ ಸರ್ಕಾರವು ಆದೇಶ ಹೊರಡಿಸಿದ್ದು, ಜಿಲ್ಲೆಯ ರೈತ ಭಾಂದವರು ಬೆಂಬಲ ಬೆಲೆ ಯೋಜನೆಯ ಸದುಪಯೋಗ ಪಡೆದುಕೊಂಡು ತಮ್ಮ ಸಮೀಪದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ / ಖರೀದಿ ಕೇಂದ್ರಗಳಿಗೆ ಭೇಟಿ ನೀಡಿ ತಾವು ಬೆಳೆದ ಎಫ್.ಎ.ಕ್ಯೂ ಗುಣಮಟ್ಟದ ಕುಸುಬೆಯನ್ನು ನಿಗದಿತ ಅವಧಿಯಲ್ಲಿ ಮಾರಾಟಕ್ಕೆ ನೋಂದಾಯಿಸಿಕೊಂಡು ಮಾರಾಟ ಮಾಡಬೇಕೆಂದು ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಝಿಯಾ ತರನ್ನುಮ್ ಅವರು ತಿಳಿಸಿದ್ದಾರೆ.

ದಿನಾಂಕ: 22-06-2026 ರವರೆಗೆ ರೈತರ ನೋಂದಣಿ ಕಾರ್ಯವನ್ನು ಹಾಗೂ ದಿನಾಂಕ: 02-07-2026ರವರೆಗೆ ಖರೀದಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗುತ್ತಿದೆ. ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆಯು ಸಹ ಕೈಗೊಳ್ಳಲಾಗುತ್ತಿದೆ. ರೈತರಿಂದ ಖರೀದಿಸಿದ ಉತ್ಪನ್ನದ ಮೌಲ್ಯವನ್ನು ಡಿ.ಬಿ.ಟಿ. ಪೋರ್ಟಲ್ ಮೂಲಕ ಪಾವತಿಸಲಾಗುತ್ತದೆ. ಕಲಬುರಗಿ ಜಿಲ್ಲೆಯಲ್ಲಿ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ. ಗುಣಮಟ್ಟದ ಕುಸುಬೆ ಖರೀದಿಸಲು ಕರ್ನಾಟಕ ಸರ್ಕಾರವು ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳ ನಿಯಮಿತ ಸಂಸ್ಥೆಯನ್ನು ರಾಜ್ಯ ಖರೀದಿ ಸಂಸ್ಥೆಯನ್ನಾಗಿ ನೇಮಿಸಿದೆ.

ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ. ಗುಣಮಟ್ಟದ ಕುಸುಬೆ ಪ್ರತಿ ಕ್ವಿಂಟಾಲ್‌ಗೆ 6,540 ರೂ. ರಂತೆ ಪ್ರತಿ ಎಕರೆಗೆ 5 ಕ್ವಿಂಟಲ್‌ನಂತೆ ಹಾಗೂ ಪ್ರತಿ



ರೈತರಿಂದ ಗರಿಷ್ಠ 20 ಕ್ವಿಂಟಲ್‌ವರೆಗೆ ಎಫ್.ಎ.ಕ್ಯೂ. ಗುಣಮಟ್ಟದ ಕುಸುಬೆಯನ್ನು ಕಲಬುರಗಿ ಜಿಲ್ಲೆಯಲ್ಲಿ ಒಟ್ಟು 42 ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳ ಮೂಲಕ ಖರೀದಿ ಪ್ರಕ್ರಿಯೆಯನ್ನು ಕೈಗೊಳ್ಳಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸೋಮವಾರ ಜರುಗಿದ ಜಿಲ್ಲಾ ಟಾಸ್ಕ್ ಫೋರ್ಸ್ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಪ್ರತಿಯೊಂದು ಖರೀದಿ ಕೇಂದ್ರಗಳಲ್ಲಿ ರೈತರ ನೋಂದಣಿ ಹಾಗೂ ಖರೀದಿ ಪ್ರಕ್ರಿಯೆಯಲ್ಲಿ ಬಯೋಮೇಟ್ರಿಕ್ ಪಡೆಯುವುದು ಕಡ್ಡಾಯವಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಸರ್ಕಾರ ಸಹಕಾರ ಎಣ್ಣೆ ಬೀಜ ಬೆಳೆಗಾರರ ಮಹಾಮಂಡಳ ನಿಯಮಿತ ಸಂಸ್ಥೆಯ ಮೊಬೈಲ್ ಸಂಖ್ಯೆ 9591812142ಗೆ ಸಂಪರ್ಕಿಸಲು ಕೋರಲಾಗಿದೆ.

ಬಳ್ಳಾರಿ:ಸಮಾಜ ಸುಧಾರಣೆಯ ಹರಿಕಾರ ಬಾಬು ಜಗಜೀವನರಾಂ-ಲಿಡ್ಕರ್ ಅಧ್ಯಕ್ಷ ಮುಂಡರಗಿ ನಾಗರಾಜ

ಬಳ್ಳಾರಿ,ಏ.08–

ಬಾಬು ಜಗಜೀವನರಾಂ ಅವರು ಬುದ್ಧ, ಬಸವ, ಅಂಬೇಡ್ಕರರತೆ ಸಮಾಜ ಸುಧಾರಣೆಯ ಧೋರಣೆಗಳನ್ನು ಸದಾಕಾಲ ಹೊಂದಿದ್ದರು ಎಂದು ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ್ ಅವರು ಹೇಳಿದರು.

ಸೋಮವಾರ ವಿಶ್ವವಿದ್ಯಾಲಯದ ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ವಿವಿಯ ಬಾಬು ಜಗಜೀವನರಾಂ ಸಂಶೋಧನಾ ಮತ್ತು ಅಧ್ಯಯನ ಕೇಂದ್ರ ಹಾಗೂ ಬೆಂಗಳೂರು ಸಮಾಜ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಪ.ಜಾ/ ಪ.ಪಂ ಪಿಎಚ್.ಡಿ ವಿದ್ಯಾರ್ಥಿಗಳಿಗೆ ಮೂರು ದಿನಗಳ ಸಂಶೋಧನಾ ವಿಧಾನ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು. ಬಳ್ಳಾರಿ ಸುತ್ತಮುತ್ತಲಿನ ಪ್ರದೇಶಗಳಲ್ಲಿರುವ ಮೌಢ್ಯ ಆಚರಣೆಯ ಪದ್ಧತಿಗಳಾದ ದೇವದಾಸಿ, ಜಾತಿ ಪದ್ಧತಿ, ದಲಿತರಿಗೆ ದೇಗುಲ ಪ್ರವೇಶ ನಿರಾಕರಣೆಯಂತಹ ಹಲವಾರು ಅನಿಷ್ಟ ಪದ್ಧತಿಗಳ ವಿರುದ್ಧ ಹೋರಾಟ ನಡೆಸಿ ಅವುಗಳ ನಿರ್ಮೂಲನೆಗೆ ಬಾಬೂಜಿ ಅವರು ನಿರಂತರ ಹೋರಾಟ ಮಾಡಿದ್ದರು ಎಂದು ತಿಳಿಸಿದರು.

ಸಂಶೋಧನಾ ವಿದ್ಯಾರ್ಥಿಗಳು ಬಾಬು ಜಗಜೀವನರಾಂ ಅವರ ಜೀವನ ಸಾಧನೆಯನ್ನು



ಅಧ್ಯಯನ ಮಾಡಿ, ಅವರಲ್ಲಿದ್ದ ನಾಯಕತ್ವದ ಗುಣವನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಲಿಡ್ಕರ್ ಅಭಿವೃದ್ಧಿ ನಿಗಮವು ತನ್ನ ಅಧೀನಕ್ಕೆ ಒಳಪಡುವ ಉಪಜಾತಿಗಳ ಫಲಾನುಭವಿಗಳಿಗೆ, ಮಹಿಳೆಯರಿಗೆ ವಿಶೇಷ ತರಬೇತಿ ನೀಡುವುದು, ವಿವಿಧ ಕೌಶಲ್ಯಗಳ ತರಬೇತಿಗೆ ಬೆಂಗಳೂರು, ತಮಿಳುನಾಡು ಹಾಗೂ ಇಂಡೋನೇಷ್ಯಾ ದೇಶಕ್ಕೆ ಕಳುಹಿಸಿ ಕೈಗಾರಿಕಾ ತರಬೇತಿ ಒದಗಿಸುತ್ತಿದ್ದು, ಈ ಯೋಜನೆಗಳ ಪ್ರಯೋಜನ ಪಡೆದುಕೊಳ್ಳ ಬೇಕು ಎಂದು ಸಲಹೆ ನೀಡಿದರು.

ರಾಜ್ಯ ಉನ್ನತ ಶಿಕ್ಷಣ ಇಲಾಖೆಯ ನಿವೃತ್ತ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಬಿ.ಎಚ್.ಅನೀಲ್ ಕುಮಾರ್ ಅವರು ದಿಕ್ಸೂಚಿ ಭಾಷಣದಲ್ಲಿ ಮಾತನಾಡಿ, ಸಂಶೋಧನೆಗೆ ಎಐ ಮತ್ತು ಮಷಿನ್ ಲರ್ನಿಂಗ್ ನಂತಹ ಸಾಧನಗಳನ್ನು ಬಳಸುವ ಮೂಲಕ ಒಳ್ಳೆಯ ಫಲಿತಾಂಶವನ್ನು ಪಡೆಯಬಹುದು. ಯಾವುದೇ ಮಾದರಿಯ ಸಂಶೋಧನೆಗೆ ವಸ್ತುನಿಷ್ಠತೆ, ನಿರ್ದಿಷ್ಟ ಉದ್ದೇಶಗಳು ಹಾಗೂ ನೀತಿ ಸಂಹಿತೆ ಪಾಲಿಸಬೇಕು. ಇದರಿಂದ ಸಂಶೋಧನೆಯಲ್ಲಿ ನೈಜವಾದ ದತ್ತಾಂಶಗಳು ಸಂಶೋಧನೆಯ ವಿಶ್ವಾಸಾರ್ಹತೆಯನ್ನು ಹೆಚ್ಚಿಸುತ್ತದೆ ಎಂದರು.

ವಿವಿಯ ಕುಲಪತಿ ಪ್ರೊ.ಎಂ ಮುನಿರಾಜು ಅವರು ಮಾತನಾಡಿ, ರಾಜ್ಯದ ಬಹುತೇಕ ವಿವಿಗಳಲ್ಲಿರುವ ಅಧ್ಯಯನ ಪೀಠಗಳು ಆಳವಾದ ಮತ್ತು ಸ್ಥೂಲವಾದ ಉತ್ಕೃಷ್ಟ ಸಂಶೋಧನೆಯನ್ನು ಹೊರ ತರಲು ಮುಂದಾಗಬೇಕು ಎಂದು ತಿಳಿಸಿದರು.

ಬಾಬು ಜಗಜೀವನರಾಂ ಅವರ ಕುರಿತು ಅತ್ಯುತ್ತಮ ಸಂಶೋಧನಾ ಲೇಖನ ಮಂಡಿಸುವ ಸಂಶೋಧನಾ ವಿದ್ಯಾರ್ಥಿಗೆ ಪೀಠದ ವತಿಯಿಂದ 10 ಸಾವಿರ ರೂ. ನಗದು ಬಹುಮಾನ ನೀಡುವುದಾಗಿ ಇದೇ ಸಂದರ್ಭದಲ್ಲಿ ಘೋಷಿಸಿದರು.

ವಿವಿಯ ವ್ಯಾಪ್ತಿಗೆ ಒಳಪಡುವ ಗ್ರಾಮೀಣ ಶಾಲೆಗಳಿಗೆ ಮೂಲಭೂತ ಸೌಕರ್ಯವನ್ನು ಒದಗಿಸಲು ವರ್ಷಕ್ಕೆ ಒಂದು ಲಕ್ಷ ರೂ. ವ್ಯಯಿಸಲು ಕಾರ್ಯಯೋಜನೆ ಸಿದ್ಧಪಡಿಸುವಂತೆ ಪೀಠದ ಸಂಯೋಜಕರಿಗೆ ಈ ಸಂದರ್ಭದಲ್ಲಿ ಸೂಚಿಸಿದರು.

ಕಾರ್ಯಾಗಾರದ ಸಂಯೋಜಕ ಡಾ.ತಿಪ್ಪೇಸ್ವಾಮಿ ಎಚ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮವನ್ನು ಡಾ.ಸುಷ್ಮಾ ಜೋಗನ್ ನಿರೂಪಿಸಿದರು. ಡಾ.ಸಂತೋಷ ಅತಿಥಿಗಳನ್ನು ಸ್ವಾಗತಿಸಿದರು. ಸಂಶೋಧನಾರ್ಥಿ ನರಸಿಂಹ ವಂದಿಸಿದರು.

ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಪಿಎಚ್.ಡಿ ವಿದ್ಯಾರ್ಥಿಗಳಿಗೆ ಮೂರು ದಿನಗಳ ಸಂಶೋಧನಾ ವಿಧಾನ ಕಾರ್ಯಾಗಾರದಲ್ಲಿ 200ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗಿಯಾಗಲಿದ್ದಾರೆ. ಮೂರು ದಿನಗಳ ಕಾಲ ವಿವಿಧ ತಾಂತ್ರಿಕ ಗೋಷ್ಠಿಗಳು ನಡೆಯಲಿದ್ದು, ಸಂಶೋಧನಾ ಕ್ಷೇತ್ರದ ಪರಿಣಿತರು ಉಪನ್ಯಾಸ ನೀಡಲಿದ್ದಾರೆ.

ವಿವಿಯ ಎಲ್ಲ ನಿಕಾಯದ ಡೀನರು, ಎಲ್ಲ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಬೋಧಕ ಬೋಧಕೇತರ ಸಿಬ್ಬಂದಿ, ವಿದ್ಯಾರ್ಥಿಗಳು ಹಾಜರಿದ್ದರು.

ಬೇಸಿಗೆಯಲ್ಲಿ ನೀರಿನ ಅಭಾವ ತಪ್ಪಿಸಲು ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಿ : ಜಿಪಂ ಸಿಇಓ ಸೂಚನೆ

ವಿಜಯನಗರ ,ಏ.08–


ಬೇಸಿಗೆ ಆರಂಭವಾಗಿರುವ ಹಿನ್ನೆಲೆಯಲ್ಲಿ ಜಿಲ್ಲೆಯಾದ್ಯಂತ ಸಾರ್ವಜನಿಕರು ಹಾಗೂ ಜಾನುವಾರುಗಳಿಗೆ ಕುಡಿಯುವ ನೀರಿನ ಅಭಾವ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನೋಂಗ್ಜಾಯ್ ಮಹ್ಮದ್ ಅಲಿ ಅಕ್ರಮ್ ಷಾ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಮಂಗಳವಾರ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಲ ಜೀವನ್ ಮಿಷನ್ ಯೋಜನೆಯಡಿ ಪ್ರತಿ ಮನೆಗೂ ನಳದ ಮೂಲಕ ನೀರು ಪೂರೈಕೆ ಮಾಡುವ ಕಾಮಗಾರಿಗಳನ್ನು ಶೀಘ್ರ ಪೂರ್ಣಗೊಳಿಸಬೇಕು. ತಾಂತ್ರಿಕ ಕಾರಣಗಳಿಂದ ಅಪೂರ್ಣಗೊಂಡಿರುವ ಪೈಪ್‌ಲೈನ್ ಅಳವಡಿಕೆ ಮತ್ತು ಟ್ಯಾಂಕ್ ನಿರ್ಮಾಣ ಕಾಮಗಾರಿಗಳನ್ನು ನಿಗದಿತ ಅವಧಿಯಲ್ಲಿ ಮುಗಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಅಂತರ್ಜಲ ಮಟ್ಟ ಕುಸಿದಿರುವ ಹಳ್ಳಿಗಳನ್ನು ಗುರುತಿಸಿ, ಅವುಗಳಿಗೆ ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆಗೆ ಪಡೆದು ಅಥವಾ ಟ್ಯಾಂಕರ್ ಮೂಲಕ ನೀರು ಪೂರೈಸಬೇಕು. ದುರಸ್ತಿ ಅಗತ್ಯವಿರುವ ಕೈಪಂಪುಗಳನ್ನು ತಕ್ಷಣವೇ ಸರಿಪಡಿಸಲು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸ್ಥಾಪಿಸಿರುವ ಶುದ್ಧ ಕುಡಿಯುವ ನೀರಿನ ಘಟಕಗಳು ಸರಿಯಾಗಿ ಕಾರ್ಯನಿರ್ವಹಿಸುತ್ತಿರುವುದನ್ನು ಖಚಿತಪಡಿಸಬೇಕು. ತಾಂತ್ರಿಕ ದೋಷಗಳಿಂದ ಸ್ಥಗಿತಗೊಂಡ ಘಟಕಗಳನ್ನು ಪರಿಶೀಲಿಸಿ ತಕ್ಷಣ ದುರಸ್ತಿ ಮಾಡಬೇಕು ಎಂದು



ನಿರ್ದೇಶಿಸಿದರು.

ಮಳೆಗಾಲ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕಾಗಿ ನೀರಿನ ಮೂಲಗಳ ಸ್ವಚ್ಛತೆ ಕಾಪಾಡಿಕೊಳ್ಳಬೇಕು. ಗ್ರಾಮ ಮಟ್ಟದಲ್ಲಿ ಫೀಲ್ಡ್ ಟೆಸ್ಟ್ ಕಿಟ್ ಬಳಸಿ ನೀರಿನ ಗುಣಮಟ್ಟವನ್ನು ನಿಯಮಿತವಾಗಿ ಪರೀಕ್ಷಿಸಿ ದಾಖಲೆ ನಿರ್ವಹಣೆ ಕಡ್ಡಾಯ ಎಂದು ಸೂಚಿಸಿದರು.

ಕರ್ತವ್ಯ ಲೋಪ ಎಸಗುವ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ನೀರಿನ ಸಮಸ್ಯೆಗೆ 24/7 ಸಹಾಯವಾಣಿ :

ಜಿಲ್ಲೆಯ ಆರು ತಾಲೂಕುಗಳಲ್ಲಿ ಮುಂಜಾಗ್ರತ ಕ್ರಮಗಳನ್ನು ಕೈಗೊಂಡಿದ್ದರೂ, ಸಮಸ್ಯೆಗಳು ಎದುರಾದಲ್ಲಿ ಸಾರ್ವಜನಿಕರಿಂದ ದೂರುಗಳನ್ನು ಸ್ವೀಕರಿಸಿ ತಕ್ಷಣ ಪರಿಹರಿಸಲು ಜಿಲ್ಲಾ ಪಂಚಾಯಿತಿಯಲ್ಲಿ 24 ಗಂಟೆಗಳ ಕಂಟ್ರೋಲ್ ರೂಮ್ ಆರಂಭಿಸಲಾಗಿದೆ. ನೀರಿನ ಸಮಸ್ಯೆ ಎದುರಾದರೆ ಸಾರ್ವಜನಿಕರು 9480837823 ಸಂಖ್ಯೆಗೆ ಕರೆ ಮಾಡಿ ದೂರು ಸಲ್ಲಿಸಬಹುದು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೆ.ತಿಮ್ಮಪ್ಪ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ಎಸ್.ದೀಪಾ, ಡಿಡಿಪಿಐ ವೆಂಕಟೇಶ್ ರಾಮಚಂದ್ರಪ್ಪ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.



6.20 ಕೋಟಿ ರೂ. ವೆಚ್ಚದ ಸಿಸಿ ರಸ್ತೆ ಕಾಮಗಾರಿಗೆ ಶಾಸಕ ಗಣೇಶ ಭೂಮಿ ಪೂಜೆ

ಬಳ್ಳಾರಿ,ಏ.08–

ತಾಲೂಕಿನ ಗ್ರಾಮೀಣ ಭಾಗದಲ್ಲಿ ಸುಮಾರು 6.20 ಕೋಟಿ ರೂ. ವೆಚ್ಚದಲ್ಲಿ ಸಿಸಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ಜೆ.ಎನ್. ಗಣೇಶ ಮಂಗಳವಾರ ಭೂಮಿ ಪೂಜೆ ನೆರವೇರಿಸಿದರು.

ನಂತರ ಮಾತನಾಡಿದ ಅವರು, ಪ್ರದೇಶದಲ್ಲಿ ವಿವಿಧ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡು ಜನತೆಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ ಎಂದು ತಿಳಿಸಿದರು. ಇಂದಿನ ಕಾಲದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಿದರೆ ಮಕ್ಕಳ ಭವಿಷ್ಯ ಉಜ್ವಲವಾಗಲಿದೆ ಎಂದು ಅಭಿಪ್ರಾಯಪಟ್ಟರು.

ತಾಲೂಕಿನ ದೇವಲಾಪುರ ಗ್ರಾಮದ ಸೋಮಲಾಪುರದಲ್ಲಿ 2025-26ನೇ ಸಾಲಿನ 4059 ಸಿಎಂಡಿಕ್ಯೂ ಯೋಜನೆಯಡಿ ಸುಮಾರು 300 ಲಕ್ಷ ರೂ. ಹಾಗೂ ಸುಗ್ಗೇನಹಳ್ಳಿ

ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಾವಿನಹಳ್ಳಿ ಗ್ರಾಮದಲ್ಲಿ ಸುಮಾರು 320 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಲಿರುವ ಸಿಸಿ ರಸ್ತೆ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆಯ ತಾಲೂಕು ಸಮಿತಿ ಅಧ್ಯಕ್ಷ ಕೆ. ಶ್ರೀನಿವಾಸರಾವ್, ಮುಖಂಡರಾದ ವಿ. ಮಾರೇಶ, ಚಂದುಸಾಬ್, ಆರ್. ಬಸವರಾಜ, ರಾಮರಾಜು, ವಡ್ಡಿನ ಮರಿಸ್ವಾಮಿ, ನಾಯಕರ ಪಂಪಣ್ಣ, ಬಾಬುಸಾಬ್, ಬಸಯ್ಯಸ್ವಾಮಿ, ಪಂಪಣ್ಣ, ಎನ್. ರಮೇಶ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ರಾಜ್ಯದಲ್ಲಿ ಅಂತರ್ಜಲ ಬಳಕೆಯಲ್ಲಿ ಗಣನೀಯ ಇಳಿಕೆ; ವಾರ್ಷಿಕ ಅಂತರ್ಜಲ ಮರುಪೂರಣ ಸಾಮರ್ಥ್ಯ ಏರಿಕೆ

ಪರಿಣಾಮವು ಪ್ರಾದೇಶಿಕ ಮಟ್ಟದಲ್ಲಿ ಸ್ಪಷ್ಟವಾಗಿ ಗೋಚರಿಸುತ್ತಿದೆ. 2024ರ ಸಾಲಿನ ದತ್ತಾಂಶಗಳಿಗೆ ಹೋಲಿಸಿದರೆ 11 ತಾಲೂಕುಗಳ ಅಂತರ್ಜಲ ಸ್ಥಿತಿಗತಿಯಲ್ಲಿ ಸುಧಾರಣೆ ಕಂಡುಬಂದಿದೆ. ಗಮನಾರ್ಹವಾಗಿ, ಚಾಮರಾಜನಗರ ತಾಲೂಕು 'ಅತಿ-ಬಳಕೆ' ಪಟ್ಟಿಯಿಂದ 'ನಿರ್ಣಾಯಕ' ಹಂತದ ಪಟ್ಟಿಗೆ ವರ್ಗಾವಣೆಯಾಗಿರುವುದು ಸಕಾರಾತ್ಮಕ ಬೆಳವಣಿಗೆಯಾಗಿದೆ. ಅದೇ ರೀತಿ, ಬೆಳಗಾವಿಯ ಅಥಣಿ, ಬೆಂಗಳೂರು ದಕ್ಷಿಣದ ಚನ್ನಪಟ್ಟಣ, ಚಿತ್ರದುರ್ಗದ ಮೊಳಕಾಲ್ಮೂರು ಹಾಗೂ ಹಾವೇರಿಯ ರಾಣೆಬೆನ್ನೂರು, ಸವಣೂರು ಮತ್ತು ಶಿಗ್ಗಾಂವಿ ತಾಲೂಕುಗಳು 'ಅರೆ-ನಿರ್ಣಾಯಕ' ಸ್ಥಿತಿಯಿಂದ ಸಂಪೂರ್ಣ 'ಸುರಕ್ಷಿತ' ವರ್ಗಕ್ಕೆ ಯಶಸ್ವಿಯಾಗಿ ಬಡ್ತಿ ಪಡೆದಿವೆ.

ಜೊತೆಗೆ, ಗೃಹಬಳಕೆಯ ಅಂತರ್ಜಲ ಅವಲಂಬನೆಯೂ ತಗ್ಗುತ್ತಿದೆ. ಗೃಹಬಳಕೆಯ ಅಂತರ್ಜಲ ಹೊರತೆಗೆಯುವಿಕೆ ಶೇ.0.58ರಷ್ಟು ಕಡಿತಗೊಂಡಿದ್ದು, 2024ರಲ್ಲಿದ್ದ 1,21,731 ಹೆಕ್ಟೇರ್-ಮೀಟರ್ () ನಿಂದ 2025ರಲ್ಲಿ 1,21,023 ಗೆ ಇಳಿಕೆಯಾಗಿದೆ. ಜಲ ಜೀವನ್ ಮಿಷನ್ (-) ಯೋಜನೆಯಡಿ ಜನರು ಅಂತರ್ಜಲದ ಬದಲಾಗಿ ಮೇಲ್ಮೈ ನೀರಿನ ಮೂಲಗಳತ್ತ ಯಶಸ್ವಿಯಾಗಿ ಮುಖಮಾಡಿರುವುದು ಈ ಕಡಿತಕ್ಕೆ ಪ್ರಮುಖ ಕಾರಣವಾಗಿದೆ.

ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ನೋಡಿಕೊಳ್ಳಿ: ಡಾ.ಶರಣಪ್ರಕಾಶ್

ಜಿಲ್ಲೆಯ ಸಿಂಧನೂರು ತಾಲೂಕಿನಲ್ಲಿ 153 ಕೆರೆಗಳಿದ್ದು, ಅದರಲ್ಲಿ 28 ಕೆರೆಗಳು ಶೇ.51ರಿಂದ 75 ರಷ್ಟು ತುಂಬಿವೆ. 42 ಕೆರೆಗಳು ಶೇ.50 ರಷ್ಟು ತುಂಬಿದ್ದು, 84 ಕೆರಗೆಲೂ ಇನ್ನೂ ಶೇ.25ರಷ್ಟು ಸಹ ತುಂಬಿಲ್ಲ. ಕೂಡಲೇ ಎಲ್ಲಾ ಕೆರೆಗಳನ್ನು ಶೇ.100ರಷ್ಟು ಭರ್ತಿ ಮಾಡಬೇಕು. ಕಳೆದ ಬಾರಿ ನೀರಿನ ಸಮಸ್ಯೆಯನ್ನು ನೀಗಿಸಲು ಬಾಡಿಗೆಗೆ ಪಡೆದಿದ್ದ ಬೋರ್‌ವೆಲ್ ಮತ್ತು ಟ್ಯಾಂಕರ್‌ಗಳ ಬಾಡಿಗೆ ಪಾವತಿಸದಿರುವುದು ಗಮನಕ್ಕೆ ಬಂದಿದ್ದು, ಕೂಡಲೇ ಬಾಕಿ ಉಳಿದಿರುವ ಬಾಡಿಗೆ ಮೊತ್ತವನ್ನು ಆಯಾ ಬೋರ್‌ವೆಲ್ ಮತ್ತು ಟ್ಯಾಂಕರ್ ನೀಡಿದವರಿಗೆ ಪಾವತಿ ಮಾಡಬೇಕು. ಮತ್ತು ಈ ಬಾರಿ ಜಿಲ್ಲೆಯಲ್ಲಿ 35 ಗ್ರಾಮ ಪಂಚಾಯತ್‌ಗಳ 53 ಗ್ರಾಮಗಳಲ್ಲಿ 62 ಬೋವೆಲ್ ಗಳನ್ನು ಬಾಡಿಗೆ ಪಡೆಯಲಾಗಿದ್ದು, ಅಗತ್ಯವಿದ್ದರೆ, ಟ್ಯಾಂಕರ್‌ಗಳನ್ನು ಬಾಡಿಗೆ ಪಡೆದು ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಜಿಲ್ಲೆಯಲ್ಲಿರುವ 782 ಆರ್ ಒ ಪ್ಲಾಂಟ್‌ಗಳಲ್ಲಿ 589 ಘಟಕಗಳು ಚಾಲ್ತಿಯಲ್ಲಿವೆ ಉಳಿದ ಪ್ಲಾಂಟ್‌ಗಳನ್ನು ಶೀಘ್ರವೇ ಆರಂಭಿಸಬೇಕು. ಪ್ರತಿಯೊಂದು ಪ್ಲಾಂಟ್ಗಳ ರಿಪೇರಿಗಾಗಿ 50 ಸಾವಿರದಂತೆ ವೆಚ್ಚ ಮಾಡಲು ಕ್ರಿಯಾಯೋಜನೆಗೆ ಅನುಮೋದನೆ ನೀಡಲಾಗಿದ್ದು, ಅಗತ್ಯವಿದ್ದರೆ ಆಯಾ ಗ್ರಾಮ ಪಂಚಾಯತಿಯಿದ ವೆಚ್ಚ ಮಾಡಿ ಗ್ರಾಮಗಳಲ್ಲಿ ನೀರು ಶುದ್ದೀಕರಣ ಘಟಕಗಳನ್ನು ಆರಂಭಿಸಬೇಕು ಎಂದರು.

ಸಿಧನೂರು ನಗರಸಭೆ ವ್ಯಾಪ್ತಿಯಲ್ಲಿನ 31 ವಾರ್ಡ್ಗಳಲ್ಲಿ 8 ದಿನಕ್ಕೊಮ್ಮೆ ನೀರು ಸರಬರಾ ಜು ಮಾಡಲಾಗುತ್ತಿದ್ದು, ಮುದಗಲ್ ನಲ್ಲಿ 10 ದಿನಕ್ಕೊಮ್ಮೆ, ಹಟ್ಟಿ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ 8 ದಿನಕ್ಕೊಮ್ಮೆ ನೀರನ್ನು ಸರಬರಾಜು ಮಾಡಲಾಗುತ್ತಿದ್ದು, ಕೂಡಲೇ ಬಾಕಿ ಇರುವ ಕಾಮಗಾರಿಗಳನ್ನು ಪೂರ್ಣಗೊಳಿಸಿ, ಜನರಿಗೆ ಸಮರ್ಪಕವಾಗಿ ನೀರನ್ನು ಒದಗಿಸಲು ಸಂಬಧಪಟ್ಟ ಅಧಿಕಾರಿಗಳು ಕ್ರಮ ಕಯಗೊಳ್ಳಬೇಕು ಎಂದರು.

ಇದೇ ವೇಳೆ ನಗರ ಶಾಸಕ ಡಾ.ಶಿವರಾಜ ಪಾಟೀಲ್ ಮಾತನಾಡಿ, ರಾಯಚೂರು ನಗರ ವ್ಯಾಪ್ತಿಯಲ್ಲಿ ಅಂತರ್ಜಲ ಮೂಲದಿಂದ ಮಾತ್ರ ಕುಡಿಯುವ ನೀರನ್ನು ಪಡೆಯಬಹುದಾಗಿದ್ದು, ಕಳೆದ ಬಾರಿ ನಗರ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ 14 ಹಳ್ಳಿಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ನೀಗಿಸಲು ಬೋರ್‌ವೆಲ್ ಮತ್ತು ಟ್ಯಾಂಕರ್‌ಗಳನ್ನು ಬಾಡಿಗೆ ಪಡೆಯಲಾಗಿತ್ತು. ಅದಕ್ಕಾಗಿ 50 ಲಕ್ಷ ನೀಡಲಾಗುವುದು ಎಂದು ಹೇಳಲಾಗಿತ್ತು. ಆದರೆ ಈವರೆಗೆ ಕೇವಲ 6-7 ಲಕ್ಷ ಮಾತ್ರ ಬಿಡುಗಡೆ ಮಾಡಲಾಗಿದೆ. ಉಳಿದ ಬಾಡಿಗೆ ಮೊತ್ತವನ್ನು ನೀಡಿಲ್ಲ. ಹಳ್ಳಿಗಳಿಗೆ ಹೇಗೆ ಮುಖ ಹೊತ್ತು ಹೋಗಬೇಕು. ಮೊದಲ ಆಧ್ಯತೆಯಾಗಿ ಟ್ಯಾಂಕರ್ ಮತ್ತು ಬೋರ್‌ವೆಲ್ ಬಾಡಿಗೆ ಪಡೆದವರಿಗೆ ಬಾಡಿಗೆ ಹಣವನ್ನು ಪಾವತಿ ಮಾಡಬೇಕು ಎಂದು ತಿಳಿಸಿದರು.

ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ, ಕುಡಿಯುವ ನೀರಿನ ಸಮಸ್ಯೆಯ ಕುರಿತು ಮಾಹಿತಿ ನೀಡಲು ಸಾರ್ವಜನಿಕರಿಗಾಗಿ ಸಹಾಯವಾಣಿ ಆರಂಭಿಸಲಾಗಿದೆ. ಆದರೆ ಸರಿಯಾಗಿ ಸ್ಪಂದನೆ ಸಿಗುತ್ತಿಲ್ಲ ಎಂಬ ದೂರುಗಳಿವೆ. ಸಾರ್ವಜನಿಕರು ಕುಡಿಯುವ ನೀರಿನ ಕುರಿತು ಮಾಹಿತಿ ನಿಡಿದಾಗ ಅದಕ್ಕೆ ಸಂಬಧಪಟ್ಟ ನೋಡೆಲ್ ಅಧಿಕಾರಿಗಳು ಮತ್ತು ಸಹಾಯವಾಣಿ ಸಿಬ್ಬಂದಿ ಸ್ಪಂಧಿಸಬೇಕು ಎಂದರು.

ಮಾನ್ವಿಶಾಸಕ ಹಂಪಯ್ಯ ನಾಯಕ ಅವರು ಮಾತನಾಡಿ, ಮಾನ್ವಿ ತಾಲೂಕಿನ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆಯಿದ್ದು, ಗೇಜ್ ಕಡಿಮೆಯಿದೆ ಎಂದು ಅಧಿಕಾರಿಗಳು ಹೇಳುತ್ತಿದ್ದು, ಇದರಿಂದ ಕೆರೆ ತುಂಬಿಸಲು ಆಗುತ್ತಿಲ್ಲ ಎಂದರು.

ಜಿಲ್ಲೆಯಲ್ಲಿ ಜೆಜೆಎಂ ಯೋಜನೆಯಡಿಯಲ್ಲಿ ಒಟ್ಟು 1210 ಕಾಮಗಾರಿಗಳ ಗುರಿಯಿದ್ದು, ಅದರಲ್ಲಿ 1129 ಕಾಮಗಾರಿಗಳು ಪ್ರಗತಿಯಲ್ಲಿವೆ. ಉಳಿದಂತೆ 81 ಕಾಮಗಾರಿಗಳು ಪ್ರಗತಿಯಲ್ಲಿವೆ. ಈವರೆಗೆ ಶೇ.51 ರಷ್ಟು ಆರ್ಥಿಕ ಪ್ರಗತಿ ಸಾಧಿಸಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಈಶ್ವರ್ ಕುಮಾರ ಕಾಂದೂ, ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮಹಾಪತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಜಿಲ್ಲಾ ಪಂಚಾಯತ ಯೋಜನೆ ಅಧಿಕಾರಿ ಶರಣಬಸವರಾಜ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ಪ್ರಕಾಶ್, ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕು ತಹಶೀಲ್ದಾರರು, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ನಗರ ಸ್ಥಳೀಯ ಸಂಸ್ಥೆಯ ಅಧಿಕಾರಿಗಳು ಸಭೆಯಲ್ಲಿದ್ದರು.

ಭೂಮಿ ಪೂಜೆ ಕಾರ್ಯಕ್ರಮಕ್ಕೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಚಾಲನೆ

ಅಧಿಕಾರಿ ಈಶ್ವರ್ ಕುಮಾರ ಕಾಂದೂ, ಮಹಾನಗರ ಪಾಲಿಕೆ ಆಯುಕ್ತ ಜುಬಿನ್ ಮಹಾಪತ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಅರುಣಾಂಕ್ಷು ಗಿರಿ, ಅಪರ ಜಿಲ್ಲಾಧಿಕಾರಿ ಶಿವಾನಂದ, ಜಿಲ್ಲಾ ಪಂಚಾಯತ ಯೋಜನೆ ಅಧಿಕಾರಿ ಶರಣಬಸವರಾಜ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಜಿಲ್ಲಾ ಪಂಚಾಯತ್ ಲೆಕ್ಕಾಧಿಕಾರಿ ವಿಜಯಶಂಕರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನವೀನ್ ಕುಮಾರ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀದೇವಿ, ಜಿಲ್ಲಾ ಮಕ್ಕಳ ಸಂರಕ್ಷಣಾಧಿಕಾರಿ ಮನ್ಸೂರ್ ಅಹಮದ್, ರಾಯಚೂರು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಪವಾರ್, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇದ್ದರು.

ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ರೈತರು ಯೂರಿಯಾ ರಸ ಗೊಬ್ಬರ ಖರೀದಿಸಲು ಎಫ್.ಐ.ಡಿ ಸಂಖ್ಯೆ ಕಡ್ಡಾಯ: ಕೃಷಿ ಜಂಟಿ ನಿರ್ದೇಶಕ ಪ್ರಕಾಶ್ ಚೌವ್ಹಾಣ

ಅನಧಿಕೃತ ದಾಸ್ತಾನು / ಬಳಕೆಯ/ ಇತರೆ ಕಾನೂನು ಬಾಹಿರ ಚಟುವಟಿಗಳ ಬಗ್ಗೆ, ನಿಗಾವಹಿಸಲು ಜಿಲ್ಲಾ ಸಮಿತಿ ರಚನೆಯಾಗಿದ್ದು, ಅಂತವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು. ಭೂಮಿಯ ಫಲವತ್ತತೆ ಹಾಗೂ ಮಣ್ಣಿನ ಆರೋಗ್ಯದ ಹಿತದೃಷ್ಟಿಯಿಂದ ರೈತರು ಅನಗತ್ಯವಾಗಿ ಹೆಚ್ಚಿನ ರಸಗೊಬ್ಬರ ಬಳಕೆ ಮಾಡದೆ ಬೆಳೆಗೆ ಅನುಗುಣವಾಗಿ ಮಿತವಾಗಿ ರಸಗೊಬ್ಬರ ಬಳಸಬೇಕೆಂಬ ಉದ್ದೇಶದಿಂದ ಇಲಾಖೆಯು ಈ ಕ್ರಮ ಜಾರಿಗೆ ತಂದಿದೆ. ಅಲ್ಲದೆ, ರೈತರು ಇತರೆ ಸಾವಯವ ಗೊಬ್ಬರ, ಜೈವಿಕ ಗೊಬ್ಬರ ಮತ್ತು ಹಸಿರೆಲೆ ಗೊಬ್ಬರಗಳನ್ನು ಬಳಸುವಂತೆ ತಿಳಿಸಿದೆ.

ಅಧಿಕೃತ ರಸಗೊಬ್ಬರ ಮಾರಾಟಗಾರರು ಕಡ್ಡಾಯವಾಗಿ ಕೆ-ಕಿಸಾನ್ ತಂತ್ರಾಂಶದಲ್ಲಿ ರೈತರ ಎಫ್.ಐ.ಡಿ. ನಮೂದಿಸಿ ಯೂರಿಯಾ ಮಾರಾಟ ಮಾಡಬೇಕು. ಒಂದು ವೇಳೆ 'ಓ' ಫಾರಂ ನವೀಕರಿಸದೆ ಮಾರಾಟ ಮಾಡಿದರೆ, ನಿಗದಿಪಡಿಸಿದ ಗರಿಷ್ಟ ಮಾರಾಟ ಬೆಲೆಗಿಂತ ಹೆಚ್ಚಿನ ದರಕ್ಕೆ ಮಾರಿದರೆ ಅಥವಾ ಕೃಷಿಯೇತರ ಉದ್ದೇಶಗಳಿಗೆ ಸರಬರಾಜು ಮಾಡುವುದು. ಇತರ ಕಾನೂನುಬಾಹಿರ ಚುಟುವಟಿಕೆ ಕಂಡುಬದಲ್ಲಿ ಅಂತಹ ಮಾರಾಟಗಾರರ ವಿರುದ್ಧ ರಸಗೊಬ್ಬರ ನಿಯಂತ್ರಣ ಕಾಯ್ದೆ ಅನ್ವಯ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ವಿಶ್ವ ಆರೋಗ್ಯ ದಿನ ಆಚರಣೆ: ಜನರು ಉತ್ತಮ ಆರೋಗ್ಯ ಕಾಪಾಡಿಕೊಳ್ಳಬೇಕು: ಡಾ.ಸುರೇಂದ್ರ ಬಾಬು

ಅಭಿಯಾನವು ವಿಜ್ಞಾನ ಮತ್ತು ಸಾರ್ವಜನಿಕ ಆರೋಗ್ಯದಲ್ಲಿ ವಿಶ್ವಾಸವನ್ನು ಪುನರ್‌ನಿರ್ಮಿಸಲು ಒಗ್ಗಟ್ಟನ್ನು ಒತ್ತಾಯಿಸುತ್ತದೆ ಎಂದರು.

ಪ್ರತಿಯೊಬ್ಬರೂ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ, ಜಾಗೃತಿ ಮೂಡಿಸುವ ಮೂಲಕ, ತಮ್ಮ ಅನುಭವಗಳನ್ನು ಹಂಚಿಕೊಳ್ಳುವ ಮೂಲಕ ಮತ್ತು ನ್ಯಾಯಯುತ, ಆಧಾರಿತ ನೀತಿಗಳನ್ನು ರಚಿಸಲು ಸಹಾಯ ಮಾಡುವ ಮೂಲಕ ಭಾಗವಹಿಸಲು ಪ್ರೋತ್ಸಾಹಿಸಲಾಗುತ್ತದೆ. ಹವಮಾನಕ್ಕನುಗುಣವಾಗಿ ಬೇಸಿಗೆಯ ಪ್ರಕರತೆ ನವಜಾತ ಶಿಶು, ಗರ್ಭಿಣಿ, ಬಾಣಂತಿ, ಸೇರಿದಂತೆ ವಯೋವೃದ್ಧರ ಸುರಕ್ಷತೆ ಕಾಳಜಿ ಆದ್ಯತೆ ನೀಡಬೇಕೆಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸರ್ವೇಕ್ಷಣಾದಿಕಾರಿ ಡಾ.ಗಣೇಶ ಕೆ., ಜಿಲ್ಲಾ ಎನ್ಫೋರ್ಸಮೆಂಟ್ ಅಧಿಕಾರಿ ಡಾ.ಶಿವಕುಮಾರ್ ನಾರಾ, ತಾಲೂಕು ಆರೋಗ್ಯ ಅಧಿಕಾರಿ ಡಾ.ಅಮೃತ್ ಹುಕ್ಕೇರಿ, ಸಹಾಯಕ ಆಡಳಿತ ಅಧಿಕಾರಿ ಶಹಜಾನ್, ಕಚೇರಿ ಅಧಿಕ್ಷಕ ಶ್ರೀಧರ್ ಕುಲಕರ್ಣಿ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಬಸಯ್ಯ, ಆಪ್ತ ಸಹಾಯಕ ಲೇಪಾಕ್ಷಯ್ಯ, ಬಿಹೆಚ್‌ಇಓ ನಾಗರಾಜ್ ಸರೋಜಾ ಕೆ., ಹಿರಿಯ ಹೆಚ್‌ಐಓ ಸುರೇಶ, ತಾಯಪ್ಪ, ಅಡಿವೆಪ್ಪ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಕಚೇರಿ ಅಧಿಕಾರಿ ಸಿಬ್ಬಂದಿಯವರು ಕಾರ್ಯಕ್ರಮದಲ್ಲಿ ಉಪಸ್ಥಿತಿರಿದ್ದರು.

ಪರಿಶ್ರಮವೇ ಯಶಸ್ಸಿನ ಮಂತ್ರ : ಡಾ.ತ್ರಿಮೂರ್ತಿ ಶಿವಾಚಾರ್ಯರು



ಸೇಡಂ,ಏ.08-

ಜೀವನದಲ್ಲಿ ಯಶಸ್ಸು ಸಾಧಿಸಲು ಶೇಕಡಾ 99ರಷ್ಟು ಕಠಿಣ ಪರಿಶ್ರಮ ಮತ್ತು ಕೇವಲ 1ರಷ್ಟು ಪ್ರೇರಣೆ ಸಾಕು ಎಂದು ತೊಟ್ನಳ್ಳಿ ಮಹಾಂತೇಶ್ವರ ಮಠದ ಪೂಜ್ಯ ಶ್ರೀ ಡಾ. ತ್ರಿಮೂರ್ತಿ ಶಿವಾಚಾರ್ಯರು ಅಭಿಪ್ರಾಯಪಟ್ಟರು. ತಾಲೂಕಿನ ತೊಟ್ನಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ವಿದ್ಯಾರ್ಥಿಗಳ ಸೃಜನಶೀಲ ಬರವಣಿಗೆಯ ಸಂಕಲನ ಅರಿವಿನ ಅಂಗಳ ಕೃತಿ ಲೋಕಾರ್ಪಣೆ ಹಾಗೂ 7ನೇ ತರಗತಿ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಸ್ವತಃ ರಚಿಸಿದ ಕವನ, ಕಥೆ ಹಾಗೂ ಲೇಖನಗಳ ಸಂಕಲನವನ್ನು ಶ್ಲಾಘಿಸಿದ ಅವರು, ''1ರಿಂದ 3ನೇ ತರಗತಿಯ ಪುಟಾಣಿ ಮಕ್ಕಳಲ್ಲಿರುವ ಪ್ರತಿಭೆ ಅದ್ಭುತವಾಗಿದೆ. ಕೃತಿ ಪ್ರಕಟವಾದ ನಂತರವೂ ನಿಮ್ಮ ಬರವಣಿಗೆ ಮುಂದುವರಿಯಲಿ, ಸಾಹಿತ್ಯ ಕ್ಷೇತ್ರದಲ್ಲಿ ಇನ್ನಷ್ಟು ಎತ್ತರಕ್ಕೇರಬೇಕು'' ಎಂದು ಹಾರೈಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಶಿವಯ್ಯಸ್ವಾಮಿ ಬಿಬ್ಬಳ್ಳಿ ಮಾತನಾಡಿ, ''ಮಕ್ಕಳನ್ನು ದೂಷಿಸುವ ಬದಲು ಪೋಷಕರು ತಮ್ಮ ಜವಾಬ್ದಾರಿಯನ್ನು ಅರಿಯಬೇಕು. ಮಕ್ಕಳ ಶಾಲಾ ಚಟುವಟಿಕೆಗಳ ಮೇಲೆ ಗಮನ ಹರಿಸುವುದು ಅಗತ್ಯ. ಪೋಷಕರ ನಿರ್ಲಕ್ಷ್ಯವೇ ಮಕ್ಕಳ ದಾರಿ ತಪ್ಪುವ ಪ್ರಮುಖ ಕಾರಣ'' ಎಂದು ಹೇಳಿದರು.


ಶಾಲೆಯ ಪ್ರಭಾರಿ ಮುಖ್ಯಗುರು ಗಾಯತ್ರಿದೇವಿ ಬೊಮ್ನಳ್ಳಿ ಮಾತನಾಡಿ, ''ಮಕ್ಕಳ ಸೃಜನಶೀಲತೆ ಪರೀಕ್ಷಿಸಲು ನೀಡಿದ ಚಟುವಟಿಕೆಯಲ್ಲಿ ಅವರ ಪ್ರತಿಭೆ ನನಗೆ ಆಶ್ಚರ್ಯ ತಂದಿತು. ಅದರಿಂದಲೇ ಅವರ ಪ್ರತಿಭೆಯನ್ನು ಹೊರತರುವ ಸಂಕಲ್ಪ ಕೈಗೊಂಡೆ. ಇಂದು ಅವರ ಬರಹಗಳು ಕೃತಿ ರೂಪದಲ್ಲಿ ಹೊರಬಂದಿರುವುದು ಸಂತೋಷ ತಂದಿದೆ'' ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪುಸ್ತಕದ ಸಂಪಾದಕ ಗುರುಪಾದ ಡಬರಿ, ಕೃತಿ ಪರಿಚಯಿಸಿದ ಸಂತೋಷಕುಮಾರ ತೋಟ್ನಳ್ಳಿ ಮಾತನಾಡಿದರು. ವೇದಿಕೆಯಲ್ಲಿ ಹಿರಿಯ ಪತ್ರಕರ್ತ ಹಾಗೂ ಪ್ರಕಾಶಕರಾದ ನಾಗಯ್ಯಸ್ವಾಮಿ ಬೊಮ್ನಳ್ಳಿ, ಉದ್ಯಮಿ ಸಿದ್ದು ಮಾಲಿಪಾಟೀಲ್, ಎಸ್‌ಡಿಎಂಸಿ ಅಧ್ಯಕ್ಷ ರಮೇಶ್ ಪೋಲಿಸಪಾಟೀಲ್, ಉಪಾಧ್ಯಕ್ಷ ಬಸವರಾಜ್ ಪೂಜಾರಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಅತ್ಯುತ್ತಮ ಶಿಕ್ಷಕಿ ಪ್ರಶಸ್ತಿ ಪಡೆದ ಪದ್ಮಾವತಿ ರೊಟ್ಟಿ, ಸುಮಂಗಲಾ ಕೊರೆ, ಜಗದೇವಿ ಗೌರೆ ಹಾಗೂ ಪತ್ರಕರ್ತರಾದ ಶರಣಯ್ಯಸ್ವಾಮಿ ಬೊಮ್ನಳ್ಳಿ, ಸಿದ್ದಲಿಂಗಯ್ಯಸ್ವಾಮಿ ಮಲಕೂಡ, ಶರಣಪ್ಪ ಎಳ್ಳಿ, ಸುರೇಶ ಬಿಜನಳ್ಳಿ ಅವರನ್ನು ಸನ್ಮಾನಿಸಲಾಯಿತು.

ಶಿಕ್ಷಕ ಸಿದ್ದಣ್ಣ ವಾಡೆದ್ ಕಾರ್ಯಕ್ರಮ ನಿರೂಪಿಸಿದರು. ಶಿವರಾಜ ಸ್ವಾಗತಿಸಿದರು. ಶಿವಕುಮಾರ ವಂದಿಸಿದರು.

ದಾಸಿಮಯ್ಯರ ವಚನಗಳು ಸಮಾಜಕ್ಕೆ ದಾರಿದೀಪ : ಡಾ.ಮೃತ್ಯುಂಜಯ ರುಮಾಲೆ



ಹೊಸಪೇಟೆ,ಏ.08-

ಸಂಪತ್ತನ್ನು ತಳ್ಳಿಹಾಕಿ ಮೌಲ್ಯಾಧಾರಿತ ಜೀವನವನ್ನು ಬೋಧಿಸಿದ ಮಹಾಶರಣ ದೇವರ ದಾಸಿಮಯ್ಯರ ಚಿಂತನೆಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿದ್ದು, ಅವರ ವಚನಗಳು ಕಾಲಾತೀತ ಮಹತ್ವ ಹೊಂದಿವೆ ಎಂದು ನಿವೃತ್ತ ಪ್ರಾಧ್ಯಾಪಕರಾದ ಡಾ. ಮೃತ್ಯುಂಜಯ ರುಮಾಲೆ ಹೇಳಿದರು.

ಕನ್ನಡ ವಿಶ್ವವಿದ್ಯಾಲಯದ ಪಂಪ ಸಭಾಂಗಣದಲ್ಲಿ ದೇವರ ದಾಸಿಮಯ್ಯ ಅಧ್ಯಯನ ಪೀಠದಿಂದ ಆಯೋಜಿಸಲಾದ ''ದಾಸಿಮಯ್ಯ ವಚನಗಳಲ್ಲಿ ವಸ್ತು ಮತ್ತು ಆತ್ಮ'' ವಿಷಯದ ಉಪನ್ಯಾಸದಲ್ಲಿ ಅವರು ಮಾತನಾಡಿದರು.

ಬಟ್ಟೆ ನೇಯುವ ಮೂಲಕ ಜೀವನ ನಡೆಸಿದ ದಾಸಿಮಯ್ಯರು ''ನನಗೆ ಸಂಪತ್ತು ಬೇಡ'' ಎಂಬ ಸಂದೇಶದ ಮೂಲಕ ಆ ಕಾಲದ ಸಾಮಾಜಿಕ ವ್ಯವಸ್ಥೆಗೆ ಸೂಕ್ಷ್ಮ ವಿರೋಧ ವ್ಯಕ್ತಪಡಿಸಿದ್ದರು. ವಚನಕಾರ, ತತ್ವಜ್ಞಾನಿ ಹಾಗೂ ಚಿಂತಕರಾಗಿ ಅವರು ವಿಶಿಷ್ಟ ಸ್ಥಾನ ಪಡೆದಿದ್ದಾರೆ ಎಂದು ಹೇಳಿದರು.

ದಾಸಿಮಯ್ಯ ಮತ್ತು ಬಸವಣ್ಣನವರು ನೇರವಾಗಿ ಭೇಟಿಯಾಗದಿದ್ದರೂ, ದಾಸಿಮಯ್ಯರ ಚಿಂತನೆಗಳು ಬಸವಣ್ಣನವರ ಮೇಲೆ ಪ್ರಭಾವ ಬೀರಿವೆ ಎಂದು ತಿಳಿಸಿದರು. ವಚನ ಸಾಹಿತ್ಯವನ್ನು ಸಮಗ್ರವಾಗಿ ಅರ್ಥೈಸಿದಾಗ ಮಾತ್ರ ಇಂದಿನ ಸಾಮಾಜಿಕ ಗೊಂದಲಗಳಿಗೆ ಪರಿಹಾರ ದೊರೆಯುತ್ತದೆ ಎಂದು ಅಭಿಪ್ರಾಯಪಟ್ಟರು.

ಮರದಲ್ಲಿರುವ ಬೆಂಕಿ, ಹಾಲಿನಲ್ಲಿರುವ ತುಪ್ಪ, ದೇಹದಲ್ಲಿರುವ ಆತ್ಮದಂತೆ ಕಾಣದ ಸತ್ಯಗಳನ್ನು ದಾಸಿಮಯ್ಯರು ತಮ್ಮ ವಚನಗಳಲ್ಲಿ ಪರಿಣಾಮಕಾರಿಯಾಗಿ ವಿವರಿಸಿದ್ದಾರೆ. ''ಬೇಕು'' ಎನ್ನುವ ಮನೋಭಾವದಿಂದ ''ಬೇಡ'' ಎನ್ನುವ ತತ್ವದತ್ತ ಸಮಾಜವನ್ನು ಕೊಂಡೊಯ್ಯುವ ಮಾರ್ಗದರ್ಶಕರಾಗಿ ಅವರು ಕಾಣಿಸುತ್ತಾರೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಡಾ. ಡಿ.ವಿ. ಪರಮಶಿವಮೂರ್ತಿ ಮಾತನಾಡಿ, ದಾಸಿಮಯ್ಯರ ಕುರಿತು ಹೆಚ್ಚಿನ ಮೂಲಭೂತ ಸಂಶೋಧನೆ ಅಗತ್ಯವಿದೆ ಎಂದು ತಿಳಿಸಿದರು. ಅವರ ವಚನಗಳಲ್ಲಿ ಸಂಸಾರಿಕ ಹಾಗೂ ಆಧ್ಯಾತ್ಮಿಕ ಅಂಶಗಳ ಸಮನ್ವಯ ಸ್ಪಷ್ಟವಾಗಿದೆ ಎಂದು ಹೇಳಿದರು.

ಬಟ್ಟೆ ನೇಯುವ ಸಮುದಾಯವು ಮಾನವ ಸಮಾಜವನ್ನು ನಾಗರಿಕತೆಯತ್ತ ಕೊಂಡೊಯ್ಯುವಲ್ಲಿ ಮಹತ್ವದ ಪಾತ್ರ ವಹಿಸಿದ್ದರೂ, ಆಧುನಿಕ ಯಂತ್ರಗಳ ಬಳಕೆ ಹಾಗೂ ಚೈನಾ ಸಿಲ್ಕ್ ಆಮದುದಿಂದ ಈ ವೃತ್ತಿಗೆ ಹಿನ್ನಡೆಯಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ವಿವಿಧ ವಿಭಾಗಗಳ ಡೀನ್‌ಗಳು, ಪ್ರಾಧ್ಯಾಪಕರು, ಸಂಶೋಧಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



ಪಕ್ಷದೊಳಗಿನ ಭಿನ್ನಾಭಿಪ್ರಾಯ ಬಹಿರಂಗ ಬೇಡ: ಕಾಂಗ್ರೆಸ್ ಮುಖಂಡರಿಂದ ಎಚ್ಚರಿಕೆ

ಅಫಜಲಪುರ,ಏ.08-

ಮಾಜಿ ಸಚಿವ ಮಾಲಿಕಯ್ಯ ಗುತ್ತೇದಾರ್ ಹಾಗೂ ಮುಸ್ಲಿಂ ಸಮುದಾಯದ ಹಿರಿಯ ಮುಖಂಡ ಮಕ್ಬೂಲ್ ಪಟೇಲ್ ಅವರಿಗೆ ಏನಾದರೂ ಗೊಂದಲಗಳು ಇದ್ದರೆ ಪಕ್ಷದ ಚೌಕಟ್ಟಿನಲ್ಲೇ ಚರ್ಚಿಸಬೇಕು, ಬಹಿರಂಗ ಹೇಳಿಕೆಗಳಿಂದ ಪಕ್ಷಕ್ಕೆ ಹಾನಿಯಾಗುತ್ತದೆ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಮೇಶ್ ಪೂಜಾರಿ ಹೇಳಿದರು. ಪಟ್ಟಣದ ಬ್ಲಾಕ್ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿ ಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ರೇವೂರ(ಬಿ) ಗ್ರಾಮದ ಕಾರ್ಯಕ್ರಮದಲ್ಲಿ ಮಾಲಿಕಯ್ಯ ಗುತ್ತೇದಾರ್ ಅವರು ಶಾಸಕ ಎಂ.ವೈ. ಪಾಟೀಲ್ ಬಗ್ಗೆ ಒಳ್ಳೆಯ ಅಭಿಪ್ರಾಯ ವ್ಯಕ್ತಪಡಿಸಿ, ಅವರ ಪುತ್ರ ಅರುಣಕುಮಾರ ಪಾಟೀಲ್ ವಿರುದ್ಧ ಬಹಿರಂಗವಾಗಿ ಹೇಳಿಕೆ ನೀಡಿರುವುದು ಸರಿಯಲ್ಲ ಎಂದು ತಿಳಿಸಿದರು.

ಮುಸ್ಲಿಂ ಸಮುದಾಯದ ಹಿರಿಯ ಮುಖಂಡ ಮಕ್ಬೂಲ್ ಪಟೇಲ್ ಅವರು ಅಹಿಂದ ವರ್ಗಗಳಿಗೆ ನಾಮ ನಿರ್ದೇಶನದಲ್ಲಿ ಅವಕಾಶ ನೀಡಬೇಕೆಂದು ಹೇಳಿರುವುದನ್ನು ಸ್ವಾಗತಿಸುತ್ತೇವೆ. ಆದರೆ 2023ರ ವಿಧಾನಸಭೆ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಗೆ ಬೆಂಬಲ ನೀಡಿದ ಬಳಿಕ ಈಗ ಕಾಂಗ್ರೆಸ್‌ಗೆ ಸಲಹೆ ನೀಡುವುದು ಸೂಕ್ತವಲ್ಲ ಎಂದು ಅಭಿಪ್ರಾಯಪಟ್ಟರು.

ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಪ್ರಕಾಶ್ ಜಮಾದಾರ ಮಾತನಾಡಿ, ಪಕ್ಷದ ಕೆಲವು ಮುಖಂಡರು ಅರುಣಕುಮಾರ ಪಾಟೀಲ್ ಕುರಿತು ಈಗಲೇ ನಕಾರಾತ್ಮಕ ಹೇಳಿಕೆ ನೀಡುವುದು ಸಮಂಜಸವಲ್ಲ. ಇನ್ನೂ ಎರಡು ವರ್ಷಗಳ ಬಳಿಕ ನಡೆಯುವ ವಿಧಾನಸಭೆ ಚುನಾವಣೆಯವರೆಗೆ ಎಲ್ಲರೂ ಒಗ್ಗಟ್ಟಿನಿಂದ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಬೇಕು ಎಂದರು. ವೀರಶೈವ ಲಿಂಗಾಯತ ಸಮಾಜದ ತಾಲೂಕು ಅಧ್ಯಕ್ಷ ಚಂದ್ರಶೇಖರ ಕರಜಗಿ ಮಾತನಾಡಿ, ಶಾಸಕ ಎಂ.ವೈ. ಪಾಟೀಲ್ ಕೇವಲ ಒಂದು ಸಮುದಾಯಕ್ಕೆ ಮಾತ್ರ ಅವಕಾಶ ನೀಡುತ್ತಿದ್ದಾರೆ ಎಂಬ ಆರೋಪ ಸರಿಯಲ್ಲ. ಅವರು ಹಿಂದುಳಿದ ವರ್ಗಗಳಿಗೂ ಸಮಾನ ನ್ಯಾಯ ಒದಗಿಸಿದ್ದಾರೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಜಿಪಂ ಮಾಜಿ ಸದಸ್ಯ ಸಿದ್ದಾರ್ಥ್ ಬಸರಗಿಡ, ಸಿದ್ದು ಸಿರಸಗಿ, ಶರಣು ಕುಂಬಾರ, ಶಿವಾನಂದ ಗಾಡಿ ಸಾಹುಕಾರ, ಪ್ರವೀಣ್ ಕಲ್ಲೂರ, ಗೌತಮ್ ಸಕ್ಕರಗಿ, ಸೈಫನಸಾಬ ಚಿಕ್ಕಳಗಿ, ಸಿದ್ದು ಕೇರಕನಳ್ಳಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.



ಬೃಹತ್ ಬೈಕ್ ರ್‍ಯಾಲಿ ಮೂಲಕ ಮತಯಾಚನೆ. ಕಾಂಗ್ರೆಸ್ ಗೆಲವು ಖಚಿತ- ಬಸನಗೌಡ ಬಾದರ್ಲಿ

ಸಿಂಧನೂರು,ಏ.08-

ಬಾಗಲಕೋಟೆ ಉಪಚುನಾವಣೆ ಬಹಿರಂಗ ಪ್ರಚಾರಕ್ಕೆ ತೆರೆ ಹಿನ್ನೆಲೆಯಲ್ಲಿ ಯುವ ಕಾಂಗ್ರೆಸ್ ನಿಂದ ಆಯೋಜಿಸ ಲಾಗಿದ್ದ ಬೃಹತ್ ಬೈಕ್ ರ್‍ಯಾಲಿಯಲ್ಲಿ.ಎಂ ಎಲ್ ಸಿ. ಬಸನಗೌಡ ಬಾದರ್ಲಿ ಅವರು ಕಾಂಗ್ರೆಸ್ ಅಭ್ಯರ್ಥಿ ಪರ ಮತಯಾಚನೆ ಮಾಡಿದರು. ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಶ್ರೀ ಉಮೇಶ್ ಮೇಟಿ ಅವರು ಪಕ್ಷದ ಸಂಘಟನಾ ಶಕ್ತಿ ಮತ್ತು ಜನರ ನಂಬಿಕೆಯನ್ನು ಉಳಿಸಿಕೊಂಡು ಹೋಗುವ ಯುವ ನಾಯಕರಾಗಿದ್ದಾರೆ. ದಿವಂಗತ ಎಚ್ ವೈ ಮೇಟಿ ಅವರ ಅಕಾಲಿಕ ನಿಧನದಿಂದ ತೆರವಾದ ಈ ಸ್ಥಾನಕ್ಕೆ ಅವರ ಉತ್ತರರಾಧ ಶ್ರೀ ಉಮೇಶ್ ಮೇಟಿ ಅವರು ಜನಸ್ನೇಹಿ ಅಭ್ಯರ್ಥಿಯಾಗಿ ಹೊರಹಮ್ಮಿದ್ದಾರೆ. ಜನರ ಸಮಸ್ಯೆಗಳನ್ನು ತಕ್ಷಣವಾಗಿ ಸ್ಪಂದಿಸುವ ಯುವ ನಾಯಕರಾಗಿದ್ದು. ಜೊತೆಗೆ ಸರಕಾರದ ಪಂಚ ಗ್ಯಾರಂಟಿ ಯೋಜನೆ ಗಳು. ಪ್ರತಿಯೊಬ್ಬ ಬಡವರಿಗೆ ಅನುಕೂಲಕರವಾಗಿದ್ದು. ಇಂದಿನ ರ್‍ಯಾಲಿ ಯಲ್ಲಿ ಕಾಣಿಸಿಕೊಂಡ ಬಾರಿ ಜನ ಸೋಮವೇ ಅವರ ಭರ್ಜರಿ ಗೆಲುವಿನ ಮುನ್ನೋಟವಾಗಿದೆ ಆದ್ದರಿಂದ ಮತ್ತೊಮ್ಮೆ. ಬಾಗಲಕೋಟೆ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಉಮೇಶ್ ಮೇಟಿ ಅವರ ಗೆಲುವು ಖಚಿತ ಎಂದು. ವಿಧಾನ ಪರಿಷತ್ ಶಾಸಕ ಬಸನಗೌಡ ಬಾದರ್ಲಿ ಅವರು. ಪತ್ರಿಕೆಯೊಂದಿಗೆ ಮಾತನಾಡುತ್ತಾ ತಿಳಿಸಿದರು. ಈ ಬೈಕ್ ರ್‍ಯಾಲಿಯಲ್ಲಿ. ಸಚಿವರಾದ. ಆರ್ ಬಿ ತಿಮ್ಮಾಪ್ಪುರ್. ರಹೀಮ್ ಖಾನ್. ಯುವ ಕಾಂಗ್ರೆಸ್ ರಾಜ್ಯಾಧ್ಯಕ್ಷ. ಮಂಜುನಾಥ್ ಗೌಡ. ಪ್ರಧಾನ ಕಾರ್ಯದರ್ಶಿ. ರಾಹುಲ್ ಜಾರಕಿಹೊಳಿ. ಬಾಗಲಕೋಟೆ ಯುವ ಕಾಂಗ್ರೆಸ್ ಕಾರ್ಯಕರ್ತರು ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು. ಅಪಾರ ಪ್ರಮಾಣದಲ್ಲಿ ಬೈಕ್ ರ್‍ಯಾಲಿ ಯಲ್ಲಿ ಪಾಲ್ಗೊಂಡಿದ್ದರು .

ಮಹನೀಯರ ಜಯಂತಿ ಅದ್ದೂರಿ ಆಚರಣೆ: ಎಡಿಸಿ



ಬಳ್ಳಾರಿ,ಏ.08-

ಜಿಲ್ಲಾ ಕೇಂದ್ರದಲ್ಲಿ ಏ.20 ರಂದು ಬಸವ ಜಯಂತಿ, ಏ.21 ರಂದು ಶ್ರೀ ಶಂಕರಾಚಾರ್ಯ ಜಯಂತಿ ಹಾಗೂ ಏ.23 ರಂದು ಶ್ರೀ ಭಗೀರಥ ಜಯಂತಿ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ, ಅದ್ದೂರಿಯಾಗಿ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್‌ಎನ್ ಅವರು ಹೇಳಿದರು.

ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಮಹನೀಯರ ಜಯಂತಿ ಕಾರ್ಯಕ್ರಮ ಆಚರಣೆ ಕುರಿತು ಅಧಿಕಾರಿಗಳು, ಸಮುದಾಯದ ಮುಖಂಡರೊದಿಗೆ ಮಂಗಳವಾರ ಏರ್ಪಡಿಸಿದ್ದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಏ.20 ರಂದು ಬಸವ ಜಯಂತಿ ಕಾರ್ಯಕ್ರಮವನ್ನು ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದಲ್ಲಿ, ಏ.21 ರಂದು ಶ್ರೀ ಶಂಕರಾಚಾರ್ಯ ಜಯಂತಿ ಕಾರ್ಯಕ್ರಮವನ್ನು ನಗರದ ಸಂಗನಕಲ್ಲು ರಸ್ತೆಯ ಶ್ರೀ ಭಾರತೀತೀರ್ಥ ಸಭಾಭವನದಲ್ಲಿ ಹಾಗೂ ಏ.23 ರಂದು ಶ್ರೀ ಭಗೀರಥ ಜಯಂತಿ ಕಾರ್ಯಕ್ರಮವನ್ನು ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದಲ್ಲಿ ಅಚ್ಚುಕಟ್ಟಾಗಿ ಆಯೋಜಿಸಲು ನಿರ್ಧರಿಸಲಾಯಿತು. ಅದರಂತೆ ಇದಕ್ಕೆ ಬೇಕಾದ ಎಲ್ಲಾ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಹೇಳಿದರು.

ಜಯಂತಿ ಆಚರಣೆಯ ಸಂದರ್ಭದಲ್ಲಿ ಡಿಜೆ ಬಳಕೆ ಮತ್ತು ಪಟಾಕಿ ಸಿಡಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ವೇದಿಕೆ ಕಾರ್ಯಕ್ರಮದ ಆವರಣದಲ್ಲಿ ಮಾತ್ರ ಬ್ಯಾನರ್ ಅಳವಡಿಸಲು ಅವಕಾಶವಿದ್ದು, ನಗರದ ಇತರ ಯಾವುದೇ ಸಾರ್ವಜನಿಕ ಸ್ಥಳಗಳಲ್ಲಿ ಬ್ಯಾನರ್ ಹಾಕುವುದನ್ನು ನಿರ್ಬಂಧಿಸಲಾಗಿದೆ. ಶಾಂತಿ-ಸುವ್ಯವಸ್ಥೆಗೆ ಧಕ್ಕೆಯಾಗದಂತೆ ಭಕ್ತಿ-ಭಾವದಿಂದ ಮಹನೀಯರ ಜಯಂತಿ ಆಚರಿಸೋಣ. ಇದಕ್ಕೆ ಎಲ್ಲರ ಸಹಕಾರ ಅಗತ್ಯವಿದೆ ಎಂದು ತಿಳಿಸಿದರು.

ಶಿಷ್ಟಾಚಾರದಂತೆ ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರಿಗೆ, ಸಂಘ- ಸಂಸ್ಥೆಗಳ ಪದಾಧಿಕಾರಿಗಳಿಗೆ ವಿತರಿಸಿ ಕಾರ್ಯಕ್ರಮಕ್ಕೆ ಆಹ್ವಾನಿಸಬೇಕು. ಮಹನೀಯರ ಆಚಾರ-ವಿಚಾರಗಳನ್ನು ಪರಿಣಿತರಿಂದ ವಿಶೇಷ ಉಪನ್ಯಾಸ ಮೂಲಕ ತಲುಪಿಸಲು ಸಂಪನ್ಮೂಲ ವ್ಯಕ್ತಿಗಳನ್ನು ನಿಯೋಜಿಸಬೇಕು. ಮೆರವಣಿಗೆಯಲ್ಲಿ ಸಾಂಸ್ಕೃತಿಕ ಕಲಾ ತಂಡಗಳು ಭಾಗವಹಿಸಲಿವೆ. ವಚನ ಸಂಗೀತ ಗಾಯನ ಏರ್ಪಡಿಸಬೇಕು ಎಂದರು.

ಸಾಸ್ಕೃತಿಕ ನಾಯಕ, ವಿಶ್ವಗುರು ಬಸವೇಶ್ವರರ ಜಯಂತಿ ಅಂಗವಾಗಿ ವಿವಿಧ ಇಲಾಖೆಗಳ ವತಿಯಿಂದ ಸ್ತಬ್ಧಚಿತ್ರ ಆಯೋಜಿಸಲಾಗುವುದು ಎಂದು ತಿಳಿಸಿದ ಅವರು, ಜಯಂತಿ ಕಾರ್ಯಕ್ರಮಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಿ, ಯಶಸ್ವಿಗೊಳಿಸಬೇಕು ಎಂದರು.

ಇದೇ ವೇಳೆ ಸಮಾಜದ ಮುಖಂಡರು ಜಯಂತಿ ಕಾರ್ಯಕ್ರಮ ಯಶಸ್ವಿಗೆ ತಮ್ಮ ಸಲಹೆ-ಸೂಚನೆ ನೀಡಿದರು.

ಸಭೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ, ಮಹಾನಗರ ಪಾಲಿಕೆ, ಪೊಲೀಸ್ ಅಧಿಕಾರಿಗಳು, ತೋಟಗಾರಿಕೆ ಅಧಿಕಾರಿಗಳು ಮತ್ತು ಸಮಾಜದ ಮುಖಂಡರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಅಮೆರಿಕದ ಸಾಮ್ರಾಜ್ಯಶಾಹಿ ಅಹಂಕಾರಕ್ಕೆ ಇರಾನ್ ಸಡ್ಡು: ವಾಷಿಂಗ್ಟನ್ ಮುಂದಿಟ್ಟ 10 ಕಠಿಣ ಹಕ್ಕೊತ್ತಾಯಗಳು

ಅಮೆರಿಕವು ತನ್ನ ವಿಶ್ವಾಸಘಾತುಕ ಬುದ್ಧಿಯನ್ನು ಬಿಟ್ಟು ಈ 10 ಷರತ್ತುಗಳನ್ನು ಪ್ರಾಮಾಣಿಕವಾಗಿ ಪಾಲಿಸುತ್ತದೆಯೇ ಎಂಬುದನ್ನು ಕಾದುನೋಡಬೇಕಿದೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಶಾಂತಿ ಕದಡುತ್ತಾ ತನ್ನ ಸ್ವಾರ್ಥ ಸಾಧಿಸುವ ವಾಷಿಂಗ್ಟನ್‌ನ ಕುತಂತ್ರಗಳಿಗೆ ಇರಾನ್‌ನ ಈ ದಿಟ್ಟ ಬೇಡಿಕೆಗಳು ಬಲವಾದ ಪೆಟ್ಟು ನೀಡಿವೆ

ಅಮೆರಿಕದ ವಿನಾಶಕಾರಿ ವಿದೇಶಾಂಗ ನೀತಿ ಮತ್ತು ಮಧ್ಯಪ್ರಾಚ್ಯದಲ್ಲಿ ಅದರ ನಿರಂತರ ಯುದ್ಧೋನ್ಮಾದಕ್ಕೆ ಇದೀಗ ಪ್ರಬಲ ತಡೆ ಬಿದ್ದಿದೆ. ತನ್ನ ಸೇನಾಬಲದ ದರ್ಪದಿಂದ ಸಾರ್ವಭೌಮ ರಾಷ್ಟ್ರಗಳನ್ನು ಹತ್ತಿಕ್ಕುವ ವಾಷಿಂಗ್ಟನ್‌ನ ದಬ್ಬಾಳಿಕೆಯ ವಿರುದ್ಧ ಇರಾನ್ ತಿರುಗಿಬಿದ್ದಿದ್ದು, ಇತ್ತೀಚಿನ ಕದನ ವಿರಾಮ ಒಪ್ಪಂದದ ಸಂದರ್ಭದಲ್ಲಿ 10 ಕಠಿಣ ಷರತ್ತುಗಳನ್ನು ಅಮೆರಿಕದ ಮುಂದಿಟ್ಟಿದೆ. ಪಾಕಿಸ್ತಾನದ ಮಧ್ಯಸ್ಥಿಕೆಯಲ್ಲಿ ನಡೆದ ಮಾತುಕತೆಗಳ ಮೂಲಕ ಕಳುಹಿಸಲಾದ ಈ 10 ಅಂಶಗಳ ಪ್ರಸ್ತಾವನೆಯು, ಅಮೆರಿಕದ ದೌರ್ಜನ್ಯಗಳಿಗೆ ಇರಾನ್ ಎಂದಿಗೂ ಮಣಿಯುವುದಿಲ್ಲ ಎಂಬುದನ್ನು ಸ್ಪಷ್ಟಪಡಿಸಿದೆ. ಅಮೆರಿಕದ ಈ ಸಾಮ್ರಾಜ್ಯಶಾಹಿ ನೀತಿಗಳು ಹಾಗೂ ಅಂತಾರಾಷ್ಟ್ರೀಯ ಮಟ್ಟದಲ್ಲಿ ಅದರ ನಿರಂತರ ಹಸ್ತಕ್ಷೇಪಗಳು ಇಡೀ ಜಗತ್ತಿನ ಶಾಂತಿಗೆ ಕಂಟಕವಾಗಿವೆ ಎಂಬುದು ಮತ್ತೊಮ್ಮೆ ಸಾಬೀತಾಗಿದೆ.

ಇರಾನ್ ಮಂಡಿಸಿರುವ 10 ಅಂಶಗಳ ಕರಾರುವಕ್ಕಾದ ಪ್ರಸ್ತಾವನೆಯು ಕೇವಲ ತಾತ್ಕಾಲಿಕ ಶಮನವಲ್ಲ, ಬದಲಿಗೆ ಅಮೆರಿಕದ ಯುದ್ಧದಾಹಕ್ಕೆ ಶಾಶ್ವತ ಕಡಿವಾಣ ಹಾಕುವ ಗುರಿ ಹೊಂದಿದೆ. ಕೇವಲ ಎರಡು ವಾರಗಳ ಕದನ ವಿರಾಮಕ್ಕೆ ಒಪ್ಪಿರುವ ಇರಾನ್, ಭವಿಷ್ಯದ ಶಾಂತಿ ಒಪ್ಪಂದಕ್ಕೆ ಅಮೆರಿಕ ತನ್ನ ಈ ಕೆಳಗಿನ ಬೇಡಿಕೆಗಳನ್ನು ಪೂರೈಸಲೇಬೇಕು ಎಂದು ಹಕ್ಕೊತ್ತಾಯಗಳನ್ನು ಮಂಡಿಸಿದೆ.

1. ಇರಾನ್ ಮೇಲಿನ ಯುದ್ಧಕ್ಕೆ ಶಾಶ್ವತ ಅಂತ್ಯ: ಯುದ್ಧೋನ್ಮಾದಿ ಅಮೆರಿಕವು ಇರಾನ್ ಮೇಲೆ ನಡೆಸುತ್ತಿರುವ ಎಲ್ಲಾ ರೀತಿಯ ಮಿಲಿಟರಿ ದಾಳಿಗಳನ್ನು ಕೇವಲ ತಾತ್ಕಾಲಿಕವಾಗಿ ನಿಲ್ಲಿಸುವ ನಾಟಕವಾಡುವುದನ್ನು ಬಿಟ್ಟು, ಶಾಶ್ವತವಾಗಿ ಅಂತ್ಯಗೊಳಿಸಬೇಕು. ತನ್ನ ಸೇನಾಬಲದ ದರ್ಪದಿಂದ ಸಾರ್ವಭೌಮ ದೇಶಗಳನ್ನು ಬೆದರಿಸುವ ವಾಷಿಂಗ್ಟನ್‌ನ ಪ್ರವೃತ್ತಿ ಕೊನೆಯಾಗಬೇಕು ಮತ್ತು ಭವಿಷ್ಯದಲ್ಲಿ ಇರಾನ್ ಮೇಲೆ ಯಾವುದೇ ಪ್ರತ್ಯಕ್ಷ ಅಥವಾ ಪರೋಕ್ಷ ದಾಳಿ ಮಾಡುವುದಿಲ್ಲ ಎಂಬ ಲಿಖಿತ ಖಾತರಿಯನ್ನು ಅಮೆರಿಕ ನೀಡಲೇಬೇಕು.

2. ನೆರೆ ರಾಷ್ಟ್ರಗಳ ಮೇಲಿನ ದಾಳಿಗೆ ತಕ್ಷಣದ ತಡೆ: ಮಧ್ಯಪ್ರಾಚ್ಯದಲ್ಲಿ ತನ್ನ ಬೇಳೆ ಬೇಯಿಸಿಕೊಳ್ಳಲು ಮತ್ತು ತನ್ನ ಮಿತ್ರರಾಷ್ಟ್ರ ಇಸ್ರೇಲ್ ಅನ್ನು ರಕ್ಷಿಸಲು ಅಮೆರಿಕವು ಇರಾಕ್, ಲೆಬನಾನ್ (ಹಿಜ್ಬುಲ್ಲಾ) ಮತ್ತು ಯೆಮೆನ್‌ನಂತಹ ನೆರೆಹೊರೆಯ ರಾಷ್ಟ್ರಗಳ ಮೇಲೆ ನಡೆಸುತ್ತಿರುವ ವಿನಾಶಕಾರಿ ಯುದ್ಧಗಳನ್ನು ತಕ್ಷಣವೇ ನಿಲ್ಲಿಸಬೇಕು. ತನ್ನ ಸ್ವಾರ್ಥ ಹಿತಾಸಕ್ತಿಗಳಿಗಾಗಿ ಇತರರ ನೆಲದಲ್ಲಿ ರಕ್ತಪಾತ ಸೃಷ್ಟಿಸುವ ಅಮೆರಿಕದ ದಬ್ಬಾಳಿಕೆಗೆ ಇದೊಂದು ಸ್ಪಷ್ಟ ಎಚ್ಚರಿಕೆಯಾಗಿದೆ.

3. ಪ್ರಾದೇಶಿಕ ಸಂಘರ್ಷಗಳ ಸಂಪೂರ್ಣ ಸ್ಥಗಿತ: ಅಮೆರಿಕ ಮತ್ತು ಅದರ ಮಿತ್ರಪಡೆಗಳ ನಿರಂತರ ಹಸ್ತಕ್ಷೇಪದಿಂದಾಗಿ ಇಡೀ ಮಧ್ಯಪ್ರಾಚ್ಯದಲ್ಲಿ ಉಂಟಾಗಿರುವ ಅಶಾಂತಿ ಮತ್ತು ಪ್ರಾದೇಶಿಕ ಸಂಘರ್ಷಗಳನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಬೇಕು. ಬೇರೆ ದೇಶಗಳ ಆಂತರಿಕ ವಿಚಾರಗಳಲ್ಲಿ ಮೂಗು ತೂರಿಸಿ, ತನಗೆ ಬೇಕಾದಂತೆ ಸರ್ಕಾರಗಳನ್ನು ಆಡಿಸುತ್ತಾ ಅಲ್ಲಿನ ಶಾಂತಿಯನ್ನು ಕದಡುವ ಅಮೆರಿಕದ ಕುತಂತ್ರ ಬುದ್ಧಿಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಇರಾನ್ ಈ ಆಗ್ರಹವನ್ನು ಮುಂದಿಟ್ಟಿದೆ.

4. ಹಾರ್ಮುಜ್ ಜಲಸಂಧಿಯ ಷರತ್ತುಬದ್ಧ ಮರು ತೆರೆಯುವಿಕೆ: ಜಗತ್ತಿನ ತೈಲ ಪೂರೈಕೆಯಲ್ಲಿ ಅತ್ಯಂತ ಪ್ರಮುಖ ಪಾತ್ರ ವಹಿಸುವ ಹಾರ್ಮುಜ್ ಜಲಸಂಧಿಯನ್ನು ಷರತ್ತುಬದ್ಧವಾಗಿ ಮರು-ತೆರೆಯಲು ಇರಾನ್ ಒಪ್ಪಿದೆ. ಆದರೆ, ಈ ಜಲಸಂಧಿಯ ಮೇಲೆ ಇರಾನ್ ಹೊಂದಿರುವ ಸಾರ್ವಭೌಮ ಅಧಿಕಾರ ಮತ್ತು ನಿಯಂತ್ರಣವನ್ನು ಅಮೆರಿಕ ಯಾವುದೇ ಕಾರಣಕ್ಕೂ ಪ್ರಶ್ನಿಸುವಂತಿಲ್ಲ ಹಾಗೂ ತನ್ನ ನೌಕಾಪಡೆಯ ದರ್ಪವನ್ನು ಅಲ್ಲಿ ಪ್ರದರ್ಶಿಸುವಂತಿಲ್ಲ ಎಂಬುದು ಇದರ ನೇರ ಅರ್ಥವಾಗಿದೆ.

5. ಹಡಗುಗಳ ಸುರಕ್ಷಿತ ಸಂಚಾರಕ್ಕೆ ಕಟ್ಟುನಿಟ್ಟಿನ ನಿಯಮ: ಹಾರ್ಮುಜ್ ಜಲಸಂಧಿಯಲ್ಲಿ ಹಡಗುಗಳ ಮುಕ್ತ ಹಾಗೂ ಸುರಕ್ಷಿತ ಸಂಚಾರಕ್ಕಾಗಿ ಇರಾನ್ ರೂಪಿಸುವ ನಿಯಮಾವಳಿಗಳನ್ನು ಅಮೆರಿಕವು ಯಾವುದೇ ಅಹಂಕಾರವಿಲ್ಲದೆ ಬೇಷರತ್ತಾಗಿ ಪಾಲಿಸಬೇಕು. ಈ ಪ್ರಮುಖ ವ್ಯಾಪಾರ ಮಾರ್ಗದಲ್ಲಿ ಅಮೆರಿಕದ ಅನಗತ್ಯ ಹಸ್ತಕ್ಷೇಪ ಮತ್ತು ಬೆದರಿಕೆ ತಂತ್ರಗಳಿಗೆ ಇನ್ನು ಮುಂದೆ ಅವಕಾಶವಿಲ್ಲ ಎಂಬುದನ್ನು ಇದು ನಿಖರವಾಗಿ ಸ್ಪಷ್ಟಪಡಿಸುತ್ತದೆ.

6. ಪ್ರತಿ ಹಡಗಿಗೆ 2 ದಶಲಕ್ಷ ಡಾಲರ್ ಸುಂಕ: ಈ ಹಾರ್ಮುಜ್ ಜಲಸಂಧಿಯಲ್ಲಿ ಸಾಗುವ ಪ್ರತಿಯೊಂದು ವಾಣಿಜ್ಯ ಹಡಗಿಗೆ ನಿಖರವಾಗಿ 2 ದಶಲಕ್ಷ ಡಾಲರ್ (ಸುಮಾರು 16 ಕೋಟಿ ರೂಪಾಯಿ) ಸುಂಕವನ್ನು ವಿಧಿಸುವ ಹಕ್ಕನ್ನು ಇರಾನ್ ಕಟ್ಟುನಿಟ್ಟಾಗಿ ಪ್ರತಿಪಾದಿಸಿದೆ. ತನ್ನದೇ ನಿಯಂತ್ರಣದಲ್ಲಿರುವ ಜಲಮಾರ್ಗವನ್ನು ಬಳಸಿಕೊಳ್ಳಲು ಜಗತ್ತಿನ ಯಾವುದೇ ದೇಶವಾದರೂ ತನಗೆ ಸುಂಕ ಕಟ್ಟಲೇಬೇಕು ಎಂಬ ನಿಯಮವನ್ನು ಜಾರಿಗೆ ತರುವ ಮೂಲಕ ಅಮೆರಿಕದ ಆರ್ಥಿಕ ಪ್ರಾಬಲ್ಯಕ್ಕೆ ಇರಾನ್ ಸೆಡ್ಡು ಹೊಡೆದಿದೆ.

7. ಮರುನಿರ್ಮಾಣಕ್ಕೆ ಪರಿಹಾರದ ಆಗ್ರಹ: ಅಮೆರಿಕ ಮತ್ತು ಅದರ ಪ್ರಾದೇಶಿಕ ಮಿತ್ರ ಇಸ್ರೇಲ್ ನಡೆಸಿದ ಅಮಾನವೀಯ ಬಾಂಬ್ ದಾಳಿಗಳಿಂದಾಗಿ ಇರಾನ್‌ನ ಮೂಲಸೌಕರ್ಯಗಳಿಗೆ ಭಾರಿ ಹಾನಿಯಾಗಿದೆ. ಈ ವಿನಾಶಕ್ಕೆ ನೇರ ಹೊಣೆಯಾಗಿರುವ ಅಮೆರಿಕವೇ, ಇರಾನ್‌ನ ಆಸ್ಪತ್ರೆ, ರಸ್ತೆ ಮತ್ತಿತರ ಮರುನಿರ್ಮಾಣ ಕಾಮಗಾರಿಗಳಿಗಾಗಿ ಸಂಪೂರ್ಣ ಪರಿಹಾರ ಮೊತ್ತವನ್ನು ಪಾವತಿಸಬೇಕು ಎಂಬುದು ಅಂತಾರಾಷ್ಟ್ರೀಯ ಕಾನೂನಿನಡಿಯ ನ್ಯಾಯಯುತ ಆಗ್ರಹವಾಗಿದೆ.

8. ಆರ್ಥಿಕ ನಿರ್ಬಂಧಗಳ ಸಂಪೂರ್ಣ ರದ್ದತಿ: ಇರಾನ್ ದೇಶವು ಇತರ ರಾಷ್ಟ್ರಗಳೊಂದಿಗೆ ಮುಕ್ತವಾಗಿ ವ್ಯಾಪಾರ ಮತ್ತು ವಹಿವಾಟು ನಡೆಸದಂತೆ ಅಮೆರಿಕ ಹೇರಿರುವ ಎಲ್ಲಾ ಆರ್ಥಿಕ ನಿರ್ಬಂಧಗಳನ್ನು ಸಂಪೂರ್ಣವಾಗಿ ರದ್ದುಗೊಳಿಸಬೇಕು. ತನ್ನ ಆರ್ಥಿಕ ಬಲದ ಅಹಂಕಾರದಿಂದ ಇತರರನ್ನು ಹತ್ತಿಕ್ಕುವ ಕುತಂತ್ರದ ಭಾಗವಾಗಿ, ಇರಾನ್‌ನ ತೈಲ ಮಾರಾಟ ಮತ್ತು ಅಂತರರಾಷ್ಟ್ರೀಯ ಬ್ಯಾಂಕಿಂಗ್ ವ್ಯವಸ್ಥೆಯ ಮೇಲೆ ಅಮೆರಿಕ ಹಾಕಿರುವ ಅಡ್ಡಗಾಲು ಮತ್ತು ಆರ್ಥಿಕ ಗುಂಡಾಗಿರಿ ಶಾಶ್ವತವಾಗಿ ನಿಲ್ಲಬೇಕು.

9. ತಡೆಹಿಡಿದ ಆಸ್ತಿಗಳ ( ) ಬಿಡುಗಡೆ: ಅಂತಾರಾಷ್ಟ್ರೀಯ ನಿಯಮಗಳನ್ನು ಗಾಳಿಗೆ ತೂರಿ, ತನ್ನ ಆರ್ಥಿಕ ಭಯೋತ್ಪಾದನೆಯ ಭಾಗವಾಗಿ ಅಮೆರಿಕ ಮತ್ತು ಪಾಶ್ಚಿಮಾತ್ಯ ದೇಶಗಳು ಅಕ್ರಮವಾಗಿ ತಡೆಹಿಡಿದಿರುವ ಇರಾನ್‌ನ ಬಿಲಿಯನ್‌ಗಟ್ಟಲೆ ಡಾಲರ್ ಮೌಲ್ಯದ ತಡೆಹಿಡಿದ ಆಸ್ತಿಗಳನ್ನು ಹಾಗೂ ಬ್ಯಾಂಕ್ ಖಾತೆಗಳನ್ನು ತಕ್ಷಣವೇ, ಯಾವುದೇ ಷರತ್ತುಗಳಿಲ್ಲದೆ ಬಿಡುಗಡೆ ಮಾಡಬೇಕು. ಬೇರೊಬ್ಬರ ಹಣವನ್ನು ಕಸಿದುಕೊಂಡು ಬೆದರಿಸುವ ಅಮೆರಿಕದ ಚಾಳಿಗೆ ಇದು ಪೆಟ್ಟು ನೀಡಿದೆ.

10. ಪರಮಾಣು ಅಸ್ತ್ರ ಹೊಂದದಿರುವ ವಾಗ್ದಾನ: ಪದೇ ಪದೇ ಮಾತು ತಪ್ಪುವ ಅಮೆರಿಕವು ಮೇಲಿನ ಎಲ್ಲಾ 9 ಷರತ್ತುಗಳನ್ನು ಪ್ರಾಮಾಣಿಕವಾಗಿ ಪಾಲಿಸಿ ತನ್ನ ಸಾಮ್ರಾಜ್ಯಶಾಹಿ ಬುದ್ಧಿಯನ್ನು ಬಿಟ್ಟರೆ ಮಾತ್ರ, ಇರಾನ್ ಕೂಡ ತನ್ನ ಕಡೆಯಿಂದ ಯಾವುದೇ ರೀತಿಯ ಪರಮಾಣು ಅಸ್ತ್ರಗಳನ್ನು ಹೊಂದುವ ಪ್ರಯತ್ನ ಮಾಡುವುದಿಲ್ಲ ಎಂದು ಭರವಸೆ ನೀಡಿದೆ. ಇದು ಸಂಪೂರ್ಣವಾಗಿ ಅಮೆರಿಕದ ಮುಂದಿನ ನಡವಳಿಕೆ ಮತ್ತು ಪ್ರಾಮಾಣಿಕತೆಯ ಆಧಾರದ ಮೇಲೆಯೇ ನಿಂತಿರುವ ಕರಾರಾಗಿದೆ.

ಅಮೆರಿಕವು ತನ್ನ ವಿಶ್ವಾಸಘಾತುಕ ಬುದ್ಧಿಯನ್ನು ಬಿಟ್ಟು ಈ 10 ಷರತ್ತುಗಳನ್ನು ಪ್ರಾಮಾಣಿಕವಾಗಿ ಪಾಲಿಸುತ್ತದೆಯೇ ಎಂಬುದನ್ನು ಕಾದುನೋಡಬೇಕಿದೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಶಾಂತಿ ಕದಡುತ್ತಾ ತನ್ನ ಸ್ವಾರ್ಥ ಸಾಧಿಸುವ ವಾಷಿಂಗ್ಟನ್‌ನ ಕುತಂತ್ರಗಳಿಗೆ ಇರಾನ್‌ನ ಈ ದಿಟ್ಟ ಬೇಡಿಕೆಗಳು ಬಲವಾದ ಪೆಟ್ಟು ನೀಡಿವೆ ಎನ್ನುವುದರಲ್ಲಿ ಯಾವುದೇ ಸಂದೇಹವಿಲ್ಲ.

ಅಮೆರಿಕ-ಇರಾನ್ ಕದನ ವಿರಾಮದಲ್ಲಿ ಚೀನಾ ಪಾತ್ರ!

ಇರಾನ್ ಮತ್ತು ಅಮೆರಿಕ ನಡುವೆ ಎರಡು ವಾರಗಳ ಕದನ ವಿರಾಮ ಘೋಷಣೆಯಾಗಿದೆ. ಈ ಕದನ ವಿರಾಮ ಒಪ್ಪಂದದ ಹಿಂದೆ, ಇರಾನ್‌ನ ಅತಿದೊಡ್ಡ ವ್ಯಾಪಾರ ಪಾಲುದಾರ ರಾಷ್ಟ್ರವಾಗಿರುವ ಚೀನಾ ಪ್ರಮುಖ ಪಾತ್ರ ವಹಿಸಿದೆ. ಪ್ರೇರಕ ಶಕ್ತಿಯಾಗಿ ಕೆಲಸ ಮಾಡಿದೆ ಎನ್ನಲಾಗಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಪ್ರಕಾರ, ಇರಾನ್ ಅನ್ನು ಮಾತುಕತೆಯ ಮೇಜಿನ ಬಳಿ ತರುವಲ್ಲಿ ಪಾಕಿಸ್ತಾನದ ಜೊತೆಗೆ ಚೀನಾ ಮಹತ್ತರ ಪಾತ್ರ ವಹಿಸಿದೆ.

ಇರಾನ್ ಜೊತೆ ಸಂಧಾನ ನಡೆಸಲು ಚೀನಾ ಮಧ್ಯಸ್ಥಿಕೆ ವಹಿಸಿದೆಯೇ ಎಂಬ ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿರುವ ಟ್ರಂಪ್, ''ಹೌದು ಎಂದು ನಾನು ಕೇಳಿದ್ದೇನೆ'' ಎಂದಿದ್ದಾರೆ.

ಮೇ ತಿಂಗಳ ಮಧ್ಯಭಾಗದಲ್ಲಿ ಟ್ರಂಪ್ ಅವರು ಚೀನಾಕ್ಕೆ ಭೇಟಿ ನೀಡಿ ಅಧ್ಯಕ್ಷ ಷಿ ಜಿನ್‌ಪಿಂಗ್ ಅವರನ್ನು ಭೇಟಿಯಾಗಲಿದ್ದಾರೆ. ಈ ಹಿನ್ನೆಲೆಯಲ್ಲಿ, ಯುದ್ಧದ ವಾತಾವರಣ ತಿಳಿಯಾಗುವುದು ಚೀನಾಕ್ಕೆ ಅತಿ ಮುಖ್ಯವಾಗಿದೆ. ಈ ಮೊದಲು ಮಾರ್ಚ್ ಅಂತ್ಯಕ್ಕೆ ನಿಗದಿಯಾಗಿದ್ದ ಚೀನಾ ಪ್ರವಾಸವನ್ನು, ಯುದ್ಧದ ಸನ್ನಿವೇಶದ ಕಾರಣ ನೀಡಿ ಟ್ರಂಪ್ ಮುಂದೂಡುತ್ತಾ ಬಂದಿದ್ದರು ಎನ್ನಲಾಗಿದೆ.

ಕದನ ವಿರಾಮ ಪ್ರಕ್ರಿಯೆಯಲ್ಲಿ ಚೀನಾ ಸದ್ದಿಲ್ಲದೆ ಪ್ರಭಾವಶಾಲಿಯಾಗಿ ಕೆಲಸ ಮಾಡಿದೆ. ಪಾಕಿಸ್ತಾನ, ಟರ್ಕಿ ಹಾಗೂ ಈಜಿಪ್ಟ್‌ನಂತಹ ಮಧ್ಯವರ್ತಿ ದೇಶಗಳ ಮೂಲಕ ಇರಾನ್ ಅನ್ನು ಶಾಂತಿಯ ಹಾದಿಗೆ ತರುವಲ್ಲಿ ಚೀನಾ ಯಶಸ್ವಿಯಾಗಿದೆ. ಮಾತುಕತೆಗಳು ನಡೆಯುತ್ತಿದ್ದ ಅವಧಿಯಲ್ಲಿ ಚೀನಾದ ಅಧಿಕಾರಿಗಳು ನಿರಂತರವಾಗಿ ಇರಾನ್ ಅಧಿಕಾರಿಗಳೊಂದಿಗೆ ಸಂಪರ್ಕದಲ್ಲಿದ್ದರು ಎಂದು ಅಸೋಸಿಯೇಟೆಡ್ ಪ್ರೆಸ್ ವರದಿ ಮಾಡಿದೆ.

''ಯುದ್ಧ ಆರಂಭವಾದಾಗಿನಿಂದಲೂ ಚೀನಾ ಶಾಂತಿಗಾಗಿ ದಣಿವರಿಯಿಲ್ಲದೆ ಕೆಲಸ ಮಾಡುತ್ತಿದೆ'' ಎಂದು ವಾಷಿಂಗ್ಟನ್‌ನಲ್ಲಿರುವ ಚೀನಾ ರಾಯಭಾರ ಕಚೇರಿ ಹೇಳಿದೆ.

ಚೀನಾ ವಿದೇಶಾಂಗ ಸಚಿವಾಲಯದ ವಕ್ತಾರ ಮಾವೋ ನಿಂಗ್ ಅವರು ಪ್ರತಿಕ್ರಿಯಿಸಿದ್ದು, ''ಎಲ್ಲ ಕಡೆಯವರು ಪ್ರಾಮಾಣಿಕತೆಯನ್ನು ಪ್ರದರ್ಶಿಸಬೇಕು ಮತ್ತು ಮೊದಲೇ ನಡೆಯಬಾರದಿದ್ದ ಈ ಯುದ್ಧವನ್ನು ಶೀಘ್ರವಾಗಿ ಕೊನೆಗೊಳಿಸಬೇಕು ಎಂಬುದನ್ನು ಚೀನಾ ಪ್ರತಿಪಾದಿಸುತ್ತಲೇ ಇತ್ತು. ಜಾಗತಿಕ ಆರ್ಥಿಕತೆ ಮತ್ತು ಇಂಧನ ಭದ್ರತೆಯ ಮೇಲೆ ಈ ಸಂಘರ್ಷ ಬೀರುತ್ತಿರುವ ಪರಿಣಾಮಗಳ ಬಗ್ಗೆ ಚೀನಾ ತೀವ್ರ ಕಳವಳಗೊಂಡಿತ್ತು'' ಎಂದು ಹೇಳಿದ್ದಾರೆ.

ಜಾಗತಿಕ ವ್ಯವಹಾರಗಳಲ್ಲಿ ತನ್ನ ಪ್ರಭಾವವನ್ನು ಹೆಚ್ಚಿಸಿಕೊಳ್ಳಲು ಚೀನಾ ಈ ಅವಕಾಶವನ್ನು ಬಳಸಿಕೊಳ್ಳುತ್ತಿದೆ ಎಂಬ ಅಭಿಪ್ರಾಯಗಳಿವೆ.

ಕಳೆದ ಮಂಗಳವಾರವಷ್ಟೇ, ಹಾರ್ಮುಜ್ ಜಲಸಂಧಿಯಲ್ಲಿ ವಾಣಿಜ್ಯ ಹಡಗುಗಳ ರಕ್ಷಣೆಗೆ ರಾಷ್ಟ್ರಗಳು ಒಗ್ಗೂಡಬೇಕು ಮತ್ತು ಬಲವಂತದಿಂದಾದರೂ ಜಲಸಂಧಿಯನ್ನು ಸಂಚಾರಕ್ಕೆ ಮುಕ್ತಗೊಳಿಸಬೇಕೆಂದು ವಿಶ್ವಸಂಸ್ಥೆ ನಿರ್ಣಯ ಮಂಡಿಸಿತ್ತು. ಈ ನಿರ್ಣಯದ ವಿರುದ್ಧ ಚೀನಾ ಮತ್ತು ರಷ್ಯಾ ತಮ್ಮ ವೀಟೋ ಅಧಿಕಾರವನ್ನು ಬಳಸಿದ್ದವು. ಅಮೆರಿಕವು ಒಂದು ನಾಗರಿಕತೆಯ ಅಸ್ತಿತ್ವಕ್ಕೇ ಬೆದರಿಕೆ ಹಾಕುತ್ತಿರುವಾಗ ಇಂತಹ ನಿರ್ಣಯವನ್ನು ಅಂಗೀಕರಿಸುವುದು ತಪ್ಪು ಸಂದೇಶ ರವಾನಿಸುತ್ತದೆ ಎಂದು ಚೀನಾದ ವಿಶ್ವಸಂಸ್ಥೆಯ ರಾಯಭಾರಿ ಫೂ ಕಾಂಗ್ ವಾದಿಸಿದ್ದರು.

ಗ್ರಾಮೀಣ ಜೀವನಾಡಿ ಮನರೇಗಾ ಕೊಲೆ: ಬಿಜೆಪಿಯ ವಿಬಿ ಜಿ ರಾಮ್ ಜಿಯಡಿ ಕೆಲಸವಿಲ್ಲದೆ ಮತ್ತೆ ಗುಳೆ



ಜಿ ರಾಮ್ ಜಿ ಇನ್ನೂ ಆರಂಭವಾಗದಿದ್ದರೂ, ಹಳೆಯ ಯೋಜನೆಯ ಕೆಲಸಗಳು ನಿಂತಿರುವುದು ಸಾವಿರಾರು ಕುಟುಂಬಗಳನ್ನು ಹಸಿವಿನ ಅಂಚಿಗೆ ತಳ್ಳಿದೆ. ಮೋದಿ ಸರ್ಕಾರ 'ವಿಕಸಿತ ಭಾರತ' ಎಂದು ಹೇಳುತ್ತಿದ್ದರೂ, ಗ್ರಾಮೀಣ ಕೂಲಿಕಾರ್ಮಿಕರ ಕೈಯಲ್ಲಿದ್ದ ಖಾತರಿಯನ್ನು ಕಿತ್ತುಕೊಂಡು ಅವರನ್ನು ನಗರಗಳ ಸಸ್ತಾ ಶ್ರಮಕ್ಕೆ ತಳ್ಳಿದೆ. ರಾಜಕೀಯ ನಿರ್ಧಾರಗಳು ಬಡವರ ಬದುಕನ್ನು ಮೂರಾಬಟ್ಟೆ ಮಾಡಿವೆ.

ಮನರೇಗಾ(ಮಹಾತ್ಮ ಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ)ವನ್ನೇ ರದ್ದುಪಡಿಸಿ 2025ರ ಡಿಸೆಂಬರ್‌ನಲ್ಲಿ ಬದಲಾಯಿಸಿದ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜ್‌ಗಾರ್ ಅಂಡ್ ಆಜೀವಿಕಾ ಮಿಷನ್(ಗ್ರಾಮೀಣ) ಅಥವಾ ವಿಬಿ ಜಿ ರಾಮ್ ಜಿ(-) ಮಸೂದೆ 2026 ಏಪ್ರಿಲ್‌ನಿಂದ ಅನುಷ್ಠಾನಗೊಳ್ಳುತ್ತದೆ ಎಂದು ಹೇಳಲಾಗಿತ್ತಾದರೂ ಇನ್ನೂ ಪೂರ್ಣ ಪ್ರಮಾಣದಲ್ಲಿ ಅನುಷ್ಠಾನವಾಗಿಲ್ಲ. ಈ ಕಾಯ್ದೆಯಿಂದ ಗ್ರಾಮೀಣ ಭಾಗಗಳ ಮನರೇಗಾ ಕೆಲಸಗಳು ಸ್ಥಗಿತಗೊಂಡಿವೆ. ಕೆಲಸವಿಲ್ಲದ ಗ್ರಾಮೀಣ ಕೂಲಿಕಾರ್ಮಿಕರ ಬದುಕು ದುಸ್ತರವಾಗಿದೆ. ಉದ್ಯೋಗ ಹುಡುಕಿ ನಗರಗಳತ್ತ ಗುಳೆ ಹೋಗುವವರ ಸಂಖ್ಯೆ ದಿನದಿಂದ ದಿನಕ್ಕೆ ಏರುತ್ತಿದೆ.

ಮನರೇಗಾವನ್ನು ಯುಪಿಎ ಸರ್ಕಾರ 2005ರಲ್ಲಿ ಜಾರಿಗೊಳಿಸಿದ್ದು, ಗ್ರಾಮೀಣ ಕುಟುಂಬಗಳಿಗೆ ವರ್ಷಕ್ಕೆ ಕನಿಷ್ಠ 100 ದಿನಗಳ ಕೆಲಸದ ಖಾತರಿ ನೀಡುವ ಮೂಲಕ ದುರ್ಬಲ ವರ್ಗಗಳ ಬದುಕನ್ನು ರಕ್ಷಿಸುತ್ತಿತ್ತು. ಜತೆಗೆ ವಲಸೆ ತಡೆಯುವ ಮತ್ತು ಗ್ರಾಮಾಭಿವೃದ್ಧಿ ಸಾಧಿಸುವ ಉದ್ದೇಶ ಹೊಂದಿತ್ತು.

ಗ್ರಾಮೀಣ ಆಸ್ತಿ ಸೃಜನೆಯಲ್ಲಿ ಮನರೇಗಾ ಪಾತ್ರ

ಮನರೇಗಾ ಅತ್ಯುತ್ತಮ ರಚನೆಯಾಗಿತ್ತು. ಮೂಲತಃ ಶೇ.60ರಷ್ಟು ಕೌಶಲ್ಯರಹಿತ ಕಾರ್ಮಿಕರಿಗೆ ಒತ್ತು ನೀಡುತ್ತಿತ್ತು. ಇದು ಕೇವಲ ಕೆಲಸವಾಗಿರಲಿಲ್ಲ, ಗ್ರಾಮೀಣ ಆಸ್ತಿ ಸೃಷ್ಟಿ ಮಾಡುತ್ತಿತ್ತು. ಮಾನವರಿಂದ ಮಾಡಲಾಗದ ಕೆಲಸಗಳಿಗೆ ಯಂತ್ರಗಳ ಸಹಾಯದಿಂದಲೂ ಕಾಮಗಾರಿ ನಡೆಸಬಹುದು ಎಂಬುದು ಮನರೇಗಾ ಕಾಯ್ದೆಯಲ್ಲಿ ಉಲ್ಲೇಖವಾಗಿದೆ. ಹಾಗಾಗಿ ಚೆಕ್ ಡ್ಯಾಮ್‌ಗಳು, ಪರ್ಕೊಲೇಷನ್ ಟ್ಯಾಂಕ್‌ಗಳು, ಕೃಷಿ ಹೊಂಡಗಳು, ನೀರಾವರಿ ಕಾಲುವೆಗಳು, ಜಮೀನುಗಳಿಗೆ ರಸ್ತೆಗಳು, ಜಮೀನು ಸಂರಕ್ಷಣೆ ಹೀಗೆ ಹಲವಾರು ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿತ್ತು.

ಅಧ್ಯಯನಗಳ ಪ್ರಕಾರ ಇದು ಅಂತರ್ಜಲ ಮಟ್ಟವನ್ನು ಏರಿಸಿದೆ. ಬಾವಿಗಳ ಸಂಖ್ಯೆ ಹೆಚ್ಚಿಸಿದೆ ಮತ್ತು ನೀರಾವರಿ ಪ್ರದೇಶವನ್ನು ವಿಸ್ತರಿಸಿದೆ. ಯಂತ್ರಗಳನ್ನು ಬಳಸದಿದ್ದರೆ ಇದೆಲ್ಲಾ ಸಾಧ್ಯವಿರಲಿಲ್ಲ. ಎಲ್ಲ ಕೆಲಸಗಳಿಗೂ ಯಂತ್ರಗಳನ್ನು ಬಳಸಿದರೆ ಕೆಲಸಗಾರರ ಸಂಖ್ಯೆ ಕಡಿಮೆಯಾಗುತ್ತದೆ, ಆಸ್ತಿಗಳು ದುರ್ಬಲವಾಗುತ್ತವೆ, ಸ್ಥಳೀಯ ಜನರಿಗೆ ಆದಾಯ ಕಡಿಮೆಯಾಗುತ್ತದೆ. ಹೀಗಾಗಬಾರದು ಎಂಬುದಕ್ಕಾಗಿಯೇ 100 ದಿನಗಳ ಮಾನವ ಕೆಲಸಗಳನ್ನು ನೀಡಲಾಗುತ್ತಿತ್ತು.

ಕೆಲಸ ನೀಡಲು ಗ್ರಾಮ ಸಭೆಗಳ ಮೂಲಕ ಯೋಜನೆಗಳನ್ನು ನಿರ್ಧರಿಸುತ್ತಿತ್ತು. ಸ್ಥಳೀಯ ಅಗತ್ಯಕ್ಕೆ ತಕ್ಕಂತೆ ನೀರು ಸಂರಕ್ಷಣೆ, ಮಣ್ಣು ಸಂರಕ್ಷಣೆ ಮಾಡುತ್ತಿತ್ತು. ಎಲ್ಲ ಶಾಲೆಗಳಿಗೂ ತಡೆಗೋಡೆ, ಶೌಚಾಲಯ, ಆಟದ ಮೈದಾನಗಳು, ಅಂಗನವಾಡಿಯಂತಹ ಗ್ರಾಮೀಣ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವುದಲ್ಲದೆ, ದನದ ಕೊಟ್ಟಿಗೆಗಳು, ತೋಟಗಾರಿಕೆ ಕೃಷಿಹೊಂಡ ಹೀಗೆ ವೈಯಕ್ತಿಕ ಅಭಿವೃದ್ಧಿಗೂ ಅನುಕೂಲವಾಗುತ್ತಿತ್ತು. ಮನರೇಗಾದಲ್ಲಿ ಮಹಿಳೆಯರ ಭಾಗವಹಿಸುವಿಕೆ ಗಣನೀಯವಾಗಿತ್ತು. ಇದು ಸಮಾನ ವೇತನ, ಬ್ಯಾಂಕ್ ಖಾತೆಗಳ ಮೂಲಕ ವ್ಯವಹಾರದಿಂದಾಗಿ ಮಹಿಳೆಯರಿಗೆ ಆರ್ಥಿಕ ಸ್ವಾತಂತ್ರ್ಯ ನೀಡಿತ್ತು. ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ಸಹಕಾರಿಯಾಗಿತ್ತು.

ಮನರೇಗಾ ಕಾಯ್ದೆಯಿಂದ ರಾಜ್ಯದ ಉತ್ತರ ಕರ್ನಾಟಕ, ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗದ ಕಾರ್ಮಿಕರು ಆಂಧ್ರಪ್ರದೇಶ, ಮುಂಬೈ, ಬೆಂಗಳೂರಿನಂತಹ ಪ್ರಮುಖ ನಗರಗಳಿಗೆ ಕೂಲಿಗಾಗಿ ಗುಳೆ ಹೋಗುವುದು ಅಕ್ಷರಶಃ ಕಡಿಮೆಯಾಗಿತ್ತು. ಹೈನುಗಾರಿಕೆ ವೃದ್ಧಿಯಾಗಿತ್ತು, ರೈತರ ತೋಟಗಾರಿಕೆಗೆ ನೆರವು ನೀಡುತ್ತಿತ್ತು. ಸರ್ಕಾರಿ ಶಾಲೆಗಳು, ಅಂಗನವಾಡಿ, ಕೆರೆ-ಕಟ್ಟೆ, ಅಂತರ್ಜಲ ಮಟ್ಟ ಹೆಚ್ಚಳ, ಕೊಳವೆ ಬಾವಿ, ರಸ್ತೆ ಸೇರಿದಂತೆ ಗ್ರಾಮಾಭಿವೃದ್ಧಿಗೆ ಅನುಕೂಲವಾಗಿತ್ತು. ಹಾಗಾಗಿ ಮನರೇಗಾ ಕೇವಲ ಉದ್ಯೋಗ ನೀಡುವುದಲ್ಲ, ಗ್ರಾಮೀಣ ಆಸ್ತಿ ಸೃಜನೆಯಲ್ಲಿ ಪ್ರಮುಖ ಪಾತ್ರ ವಹಿಸಿತ್ತು.

ಆದರೆ 2014ರ ಲೋಕಸಭಾ ಚುನಾವಣೆ ವೇಳೆ ಮೋದಿಯವರು ಮನರೇಗಾವನ್ನು ಕಾಂಗ್ರೆಸ್ ವೈಫಲ್ಯದ ಸಂಕೇತವೆಂದು ತೀವ್ರವಾಗಿ ಟೀಕಿಸಿದರು. 2015ರ ಲೋಕಸಭೆಯಲ್ಲಿ ಮಾತನಾಡುತ್ತ, ''ಇದು ಕಾಂಗ್ರೆಸ್ ವೈಫಲ್ಯದ ಜೀವಂತ ಸ್ಮಾರಕ( ). 60 ವರ್ಷಗಳ ನಂತರವೂ ಜನರು ಕೇವಲ ಹೊಂಡಗಳನ್ನು ಅಗೆಯುತ್ತಿದ್ದಾರೆ. ಇದನ್ನು ನಿಲ್ಲಿಸಬಾರದು. ಇದು ಕಾಂಗ್ರೆಸ್ ವೈಫಲ್ಯದ ಸ್ಮಾರಕವಾಗಿ ಉಳಿಯಲಿ'' ಎಂದು ಗೇಲಿ ಮಾಡಿದ್ದರು.

ಅಂದರೆ ಯೋಜನೆಯನ್ನು ರದ್ದು ಮಾಡದೆ, ಅದನ್ನು ಕಾಂಗ್ರೆಸ್ ವೈಫಲ್ಯದ ಸ್ಮಾರಕವಾಗಿ ಬಿಟ್ಟುಕೊಡುವ ಮೂಲಕ ರಾಜಕೀಯ ಲಾಭ ಪಡೆಯುವ ನಿಲುವು ತೋರಿಸಿದರು. ಆದರೆ 2014ರಿಂದ ಇಲ್ಲಿಯವರೆಗೆ, ಬಿಜೆಪಿ ಆಡಳಿತದಲ್ಲಿ 12 ವರ್ಷಗಳಲ್ಲಿ ಮನರೇಗಾ ಕಾಯ್ದೆಯನ್ನು ಹಂತ ಹಂತವಾಗಿ ದುರ್ಬಲಗೊಳಿಸುವ ಕೆಲಸ ನಡೆಯಿತು.

ಹಂತ ಹಂತವಾಗಿ ಕಡಿತ: ಡೇಟಾ ಮತ್ತು ಸಾಕ್ಷ್ಯ

ಬಜೆಟ್ ಅನುದಾನ ಕಡಿತ: ಯುಪಿಎ ಕಾಲ(2006-07ರಿಂದ 2013-14)ದಲ್ಲಿ ಒಟ್ಟು 1,660 ಕೋಟಿ ಮಾನವ ದಿನಗಳ ಉದ್ಯೋಗ ಸೃಷ್ಟಿಯಾಗಿತ್ತು. 2014-15ರಿಂದ 2024-25ರವರೆಗೆ ಬಿಜೆಪಿ ಕಾಲದಲ್ಲಿ 2,923 ಮಾನವ ದಿನಗಳ ಉದ್ಯೋಗ ಸೃಷ್ಟಿಸಿದ್ದಾಗಿ ಸರ್ಕಾರಿ ಡೇಟಾ ಹೇಳುತ್ತದೆ. ಆದರೆ ಇದು ನಗರಗಳಲ್ಲಿದ್ದ ವಲಸಿಗರು ಗ್ರಾಮೀಣ ಪ್ರದೇಶಗಳಿಗೆ ಮರಳುತ್ತಿದ್ದಂತೆ ಕೆಲಸದ ಬೇಡಿಕೆಯಲ್ಲಿ ಭಾರೀ ಏರಿಕೆ ಕಂಡುಬಂದ ಪರಿಣಾಮ ಆ ಹಣಕಾಸು ವರ್ಷದಲ್ಲಿ 389 ಕೋಟಿ ಮಾನವ ದಿನಗಳ ಕೆಲಸ ಸೃಷ್ಟಿಯಾಯಿತು. ನಂತರದ ವರ್ಷಗಳಲ್ಲಿ ಉದ್ಯೋಗ ಕಡಿತಗೊಳ್ಳುತ್ತ ಹೋಯಿತು. ಅಂದರೆ 2023-24ರಲ್ಲಿ 308.9 ಕೋಟಿ, 2024-25ರಲ್ಲಿ ಜನವರಿವರೆಗೆ ಕೇವಲ 220 ಕೋಟಿ, 2025-26ರಲ್ಲಿ ಇನ್ನೂ ಕುಸಿತವಾಯಿತು.

ಅಂತೆಯೇ ಬಜೆಟ್ ಅನುದಾನವೂ ಕುಸಿದಿದೆ. 2020-21ರಲ್ಲಿ 1.10 ಲಕ್ಷ ಕೋಟಿ ರೂಪಾಯಿಯಿಂದ 2025-26ರ ಹೊತ್ತಿಗೆ 86,000 ಕೋಟಿಗೆ ಇಳಿಯಿತು. ಅಂದರೆ ಶೇ.35.6ರಷ್ಟು ಅನುದಾನ ಕಡಿತವಾಯಿತು.

2023-24ನೇ ಸಾಲಿನ ಕೇಂದ್ರ ಬಜೆಟ್ ₹60,000 ಕೋಟಿಯನ್ನು ನಿಗದಿಪಡಿಸಿದರೂ, ಇದು 2022-23ನೇ ಸಾಲಿನ ಹಣಕಾಸು ವರ್ಷದ ₹89,000 ಕೋಟಿ ಪರಿಷ್ಕೃತ ಅಂದಾಜುಗಳಿಗಿಂತ ಶೇ.33ರಷ್ಟು ಕಡಿಮೆಯಾಗಿದೆ. 2022-23ನೇ ಸಾಲಿನ ಬಜೆಟ್ ಅನ್ನು ಹಿಂದಿನ ವರ್ಷದ ಪರಿಷ್ಕೃತ ಅಂದಾಜುಗಳಿಗೆ ಹೋಲಿಸಿದರೆ ಶೇ. 25ರಷ್ಟು ಕಡಿತಗೊಳಿಸಲಾಗಿದೆ. 2024-25ನೇ ಸಾಲಿನ ಬಜೆಟ್ ₹86,000 ಕೋಟಿಗಳನ್ನು ನಿಗದಿಪಡಿಸಲಾಗಿದೆ. ಇದು ಹಿಂದಿನ ವರ್ಷದ ಆರಂಭಿಕ ಬಜೆಟ್‌ಗಿಂತ ಹೆಚ್ಚಿದ್ದರೂ, 2023-24ರಲ್ಲಿ ವಾಸ್ತವಿಕ ವೆಚ್ಚಕ್ಕಿಂತ ₹19,297 ಕೋಟಿ ಕಡಿಮೆಯಾಗಿದೆ. ಇದು ಒಟ್ಟು ಬಜೆಟ್‌ನ ಶೇಕಡಾವಾರು ನಿಧಿಯಲ್ಲಿ 10 ವರ್ಷಗಳ ಕನಿಷ್ಠ ಮಟ್ಟವನ್ನು ಸೂಚಿಸುತ್ತದೆ.

ಬಜೆಟ್ ಅನುದಾನದಲ್ಲಿ ಕಡಿತ

2020-21: ₹61,500 ಕೋಟಿ ₹1,11,500 ಕೋಟಿ ವಾಸ್ತವಿಕ ₹1,11,170 ಕೋಟಿ(ಕೊರೊನಾ ವರ್ಷ ಬೇಡಿಕೆ)

2021-22: ₹73,000 ಕೋಟಿ ₹98,000 ಕೋಟಿ.

2022-23: ₹73,000 ಕೋಟಿ ₹89,400 ಕೋಟಿ.

2023-24: ₹60,000 ಕೋಟಿ ₹86,000 ಕೋಟಿ.

2024-25: ₹86,000 ಕೋಟಿ ₹86,000 ಕೋಟಿ.

2025-26: ₹86,000 ಕೋಟಿ ಸುಮಾರು ₹88,000 ಕೋಟಿ(ಆದರೆ ಇನ್ನೂ ಪೂರ್ಣ ವೆಚ್ಚ ತಿಳಿದಿಲ್ಲ).

2026-27: ಮನರೇಗಾ ₹30,000 ಕೋಟಿ(ತೀವ್ರ ಕಡಿತ) + - ₹95,692 ಕೋಟಿ.

ಯುಪಿಎ ಆಡಳಿದಲ್ಲಿ ರಾಜ್ಯದ ಪ್ರತಿ ಪಂಚಾಯತ್‌ಗೆ ಸರಾಸರಿ 1-2 ಕೋಟಿ ರೂಪಾಯಿ ಅನುದಾನ ಬರುತ್ತಿತ್ತು. ಕಾಲ ಕಳೆದಂತೆ ಪಂಚಾಯತ್‌ಗಳಿಗೆ ಬರುವ ಹಣವೂ ಕಡಿಮೆಯಾಯಿತು. ಪಂಚಾಯತ್‌ಗಳಿಗೆ ಅನುದಾನ ನೀಡಲು ವಿಳಂಬ ಮಾಡುತ್ತಿತ್ತು. ಕುಂಟುನೆಪಗಳನ್ನು ಹೇಳುತ್ತಿತ್ತು. ಇದೀಗ ಕೇಂದ್ರ 60% ಮಾತ್ರ ವೇತನಕ್ಕೆ ನೀಡುತ್ತದೆ. ಉಳಿದ 40% ರಾಜ್ಯಗಳು ನೀಡಬೇಕೆಂದು ಬಜೆಟ್ ಕ್ಯಾಪ್ ಹೇರಲಾಗಿದೆ.

ಡಿಜಿಟಲ್ ತೊಂದರೆಗಳು ಮತ್ತು ಕೆಲಸಗಾರರ ಡಿಲೀಷನ್

2025-26ರಲ್ಲಿ ತಪ್ಪು -, (ನ್ಯಾಷನಲ್ ಮೊಬೈಲ್ ಮಾನಿಟರಿಂಗ್ ಸಿಸ್ಟಮ್) ಮತ್ತು (ಆಧಾರ್ ಪೇಮೆಂಟ್ ಬ್ರಿಜ್) ನಿಯಮಗಳಿಂದ ಲಕ್ಷಾಂತರ ಕೆಲಸಗಾರರ ಜಾಬ್ ಕಾರ್ಡ್‌ಗಳು ರದ್ದಾದವು. ಇದರಿಂದ ಕೆಲಸ ಪಡೆಯುವುದೇ ಕಷ್ಟಕರವಾಯಿತು. ಈಗ ಪ್ರತಿ ಕುಟುಂಬಕ್ಕೆ 100 ದಿನಗಳ ಬದಲು 45-50 ದಿನಗಳಷ್ಟೇ ಕೆಲಸ ಸಿಗುತ್ತಿದೆ.

ಹಿಂದೆ ಪಂಚಾಯತ್‌ಗಳು ಮನರೇಗಾ ಮೂಲಕ ಸ್ವಂತ ನಿರ್ಧಾರದಿಂದ ಕೆಲಸ ನಡೆಸುತ್ತಿದ್ದವು. ಈಗ ಕೇಂದ್ರೀಕರಣದಿಂದ ಅವುಗಳ ಅಧಿಕಾರ ಕಳೆದುಕೊಂಡಿವೆ. ಹಣದ ಹಂಚಿಕೆಯೂ ಕಡಿಮೆಯಾಗಿದೆ. ಇದು ಗ್ರಾಮೀಣ ಅಭಿವೃದ್ಧಿಗೆ ಕಂಟಕ ತಂದಿದೆ. ಗ್ರಾಮೀಣ ಭಾಗದ ಕೂಲಿ ಕಾರ್ಮಿಕರ ಕೆಲಸ ಸಿಗದಂತಾಗಿದ್ದು, ಮತ್ತೊಮ್ಮೆ ಉದ್ಯೋಗ ಹುಡುಕಿ ನಗರಗಳತ್ತ ಗುಳೆ ಹೋಗುವ ದುಃಸ್ಥಿತಿ ಎದುರಾಗಿದೆ.

ಮೋದಿ ಸರ್ಕಾರದ ನೀತಿಗಳು(ಡಿಜಿಟಲ್ ನಿಯಂತ್ರಣ, ಬಜೆಟ್ ಕಡಿತ, ಕೇಂದ್ರೀಕರಣ) ಗ್ರಾಮೀಣ ಕಾರ್ಮಿಕರನ್ನು ಅಸಹಾಯಕರನ್ನಾಗಿ ಮಾಡಿವೆ. ನಗರಗಳಲ್ಲಿ ಅವರು ಡಿಸ್ಪೋಸಬಲ್ ಲೇಬರ್ ಆಗಿದ್ದಾರೆ. ಬೇಡಿಕೆ ಇದ್ದಾಗ ಬಳಸಿ, ಇಲ್ಲದಿದ್ದಾಗ ತ್ಯಜಿಸುವಂತಹ ಕ್ರೌರ್ಯಕ್ಕೆ ಒಳಗಾಗುತ್ತಿದ್ದಾರೆ. ಇದು ಕೃಷಿ ಮತ್ತು ಗ್ರಾಮೀಣ ಆರ್ಥಿಕತೆಯನ್ನು ದುರ್ಬಲಗೊಳಿಸಿದೆ.

ವಲಸಿಗರು ಸಸ್ತಾ ಮತ್ತು ಶೋಷಣೆಗೆ ಒಳಗಾಗುವ ಕಾರ್ಮಿಕರಾಗುತ್ತಾರೆ. ನಿರ್ಮಾಣ ಕ್ಷೇತ್ರ, ಫ್ಯಾಕ್ಟರಿ, ಇತರ ಸ್ವಚ್ಛತೆ ಕೆಲಸಗಳಲ್ಲಿ ಕಡಿಮೆ ವೇತನಕ್ಕೆ ಯಾವುದೇ ಸುರಕ್ಷತೆ ಇಲ್ಲದೆ ದುಡಿಯುತ್ತಾರೆ. ಮನರೇಗಾ ರದ್ದು ಮೂಲಕ ಕೃಷಿ ಮತ್ತು ಗ್ರಾಮೀಣ ಕೂಲಿ ಕಾರ್ಮಿಕರ ಬಲ ಕಿತ್ತುಕೊಳ್ಳಲಾಗಿದೆ; ವೇತನ ಚರ್ಚೆಯ ಹಕ್ಕು ಕಳೆದುಕೊಂಡಿದ್ದಾರೆ, ಕೃಷಿ ಬಿಕ್ಕಟ್ಟು ಹೆಚ್ಚಿದೆ.

ಮನರೇಗಾವನ್ನು ರದ್ದುಪಡಿಸಿ ಹೊಸ ಕಾಯ್ದೆ ತಂದಿದ್ದಾರೆ. ಇದು ಡಿಮಾಂಡ್-ಡ್ರಿವನ್'(ಕೆಲಸ ಕೇಳಿದರೆ ಕೊಡುವುದು)ನಿಂದ ಸಪ್ಲೈ-ಡ್ರಿವನ್'(ಕೇಂದ್ರ ನಿರ್ಧರಿಸುವುದು)ಗೆ ಬದಲಾಗಿದೆ. ರಾಜ್ಯಗಳಿಗೆ ಹೆಚ್ಚು ಹೊರೆಯಾಗಿದೆ, ಪಂಚಾಯತ್‌ಗಳ ಅಧಿಕಾರ ಕಸಿದುಕೊಂಡಿದೆ, ಕೆಲಸದ ವಿಧಗಳನ್ನು ಕೇಂದ್ರ ನಿಯಂತ್ರಿಸುತ್ತದೆ. ಆದರೆ ಇದು ಇನ್ನೂ ಆರಂಭವಾಗಿಲ್ಲದ ಕಾರಣ ಗ್ರಾಮೀಣ ಭಾಗಗಳಲ್ಲಿ ಕೆಲಸಗಳು ಸ್ಥಗಿತಗೊಂಡಿವೆ.

ಮನರೇಗಾ ಕ್ಷೀಣತೆಯು ಯೋಜನೆಯ ವೈಫಲ್ಯ ಎನ್ನುವುದಕ್ಕಿಂತ, ಗ್ರಾಮೀಣ ಭಾರತದ ಬದುಕಿನ ಮೇಲಿನ ನಡೆಯುತ್ತಿರುವ ದಾಳಿ. ವಿಬಿ ಜಿ ರಾಮ್ ಜಿ ಇನ್ನೂ ಆರಂಭವಾಗದಿದ್ದರೂ, ಹಳೆಯ ಯೋಜನೆಯ ಕೆಲಸಗಳು ನಿಂತಿರುವುದು ಸಾವಿರಾರು ಕುಟುಂಬಗಳನ್ನು ಹಸಿವಿನ ಅಂಚಿಗೆ ತಳ್ಳಿದೆ. ಮೋದಿ ಸರ್ಕಾರ ವಿಕಸಿತ ಭಾರತ ಎಂದು ಹೇಳುತ್ತಿದ್ದರೂ, ಗ್ರಾಮೀಣ ಕೂಲಿಕಾರ್ಮಿಕರ ಕೈಯಲ್ಲಿದ್ದ ಖಾತರಿಯನ್ನು ಕಿತ್ತುಕೊಂಡು ಅವರನ್ನು ನಗರಗಳ ಸಸ್ತಾ ಶ್ರಮಕ್ಕೆ ತಳ್ಳಿದೆ. ಇದು ಕೃಷಿ, ಕೂಲಿ ಬಲವನ್ನು ನಾಶಮಾಡುತ್ತಿದೆ. ರಾಜಕೀಯ ನಿರ್ಧಾರಗಳು ಬಡವರ ಬದುಕನ್ನು ಮೂರಾಬಟ್ಟೆ ಮಾಡಿವೆ. ಮನರೇಗಾ ಕಾಯ್ದೆಯನ್ನು ರಕ್ಷಿಸದಿದ್ದರೆ ಗ್ರಾಮೀಣ ಭಾರತದ ಅಭಿವೃದ್ಧಿ ಕುಸಿಯುತ್ತದೆ. ಮೋದಿಯ ವಿಕಸಿತ ಭಾರತದ ಕನಸು ಕನಸಾಗಿಯೇ ಉಳಿಯಲಿದೆ.

ಷರತ್ತುಬದ್ಧ 2 ವಾರಗಳ ಕದನ ವಿರಾಮಕ್ಕೆ ಉಭಯ ರಾಷ್ಟ್ರಗಳ ಒಪ್ಪಿಗೆ; ಹಾರ್ಮುಜ್ ಜಲಸಂಧಿ ಮುಕ್ತ

ಇರಾನ್ ಮತ್ತು ಅಮೆರಿಕ ನಡುವಿನ ಸಂಘರ್ಷದಲ್ಲಿ ಮಹತ್ವದ ಹಾಗೂ ಸಕಾರಾತ್ಮಕ ಬೆಳವಣಿಗೆಯಾಗಿದ್ದು, ಎರಡೂ ರಾಷ್ಟ್ರಗಳು ಕದನ ವಿರಾಮಕ್ಕೆ ಒಪ್ಪಿಗೆ ಸೂಚಿಸಿವೆ. ಜಾಗತಿಕ ವಹಿವಾಟಿಗೆ ಅತ್ಯಂತ ಪ್ರಮುಖವಾದ ಹಾರ್ಮುಜ್ ಜಲಸಂಧಿ ಬಿಕ್ಕಟ್ಟಿನಿಂದಾಗಿ ಎದುರಾಗಿದ್ದ ಬಹುದೊಡ್ಡ ಗಂಡಾಂತರ ಸದ್ಯಕ್ಕೆ ತಪ್ಪಿದೆ. ಇರಾನ್ ಮುಂದಿಟ್ಟಿದ್ದ ಷರತ್ತುಬದ್ಧ ಕದನ ವಿರಾಮದ ಆಧಾರದ ಮೇಲೆ ಶಾಂತಿ ಮಾತುಕತೆ ನಡೆಸಲು ಉಭಯ ದೇಶಗಳು ಸಮ್ಮತಿಸಿವೆ ಎಂದು ಅಲ್ ಜಜೀರಾ ಹಾಗೂ ಬಿಬಿಸಿ ವರದಿಗಳು ತಿಳಿಸಿವೆ.

ಇರಾನ್ ಮುಂದಿಟ್ಟಿರುವ 10 ಅಂಶಗಳ ಕದನ ವಿರಾಮ ಪ್ರಸ್ತಾಪ

ಯುದ್ಧವನ್ನು ಕೊನೆಗೊಳಿಸುವ ನಿಟ್ಟಿನಲ್ಲಿ ಇರಾನ್ ತನ್ನ ಸರ್ಕಾರಿ ಪ್ರಸಾರ ಮಾಧ್ಯಮದ ಮೂಲಕ 10 ಅಂಶಗಳ ಷರತ್ತುಬದ್ಧ ಕದನ ವಿರಾಮದ ಪ್ರಸ್ತಾಪವನ್ನು ಮುಂದಿಟ್ಟಿದೆ. ಹಾರ್ಮುಜ್ ಜಲಸಂಧಿಯನ್ನು ಮರುಮುಕ್ತಗೊಳಿಸುವ ಭರವಸೆಯೊಂದಿಗೆ ಇರಾನ್ ಹಲವು ಪ್ರಮುಖ ಷರತ್ತುಗಳನ್ನು ವಿಧಿಸಿದೆ. ಮುಖ್ಯವಾಗಿ ಇರಾನ್, ಇರಾಕ್, ಲೆಬನಾನ್ ಮತ್ತು ಯೆಮೆನ್ ಮೇಲಿನ ಸೇನಾ ಕಾರ್ಯಾಚರಣೆ ಹಾಗೂ ಯುದ್ಧವನ್ನು ಸಂಪೂರ್ಣವಾಗಿ ಮತ್ತು ಶಾಶ್ವತವಾಗಿ ನಿಲ್ಲಿಸಬೇಕು ಎಂದು ಆಗ್ರಹಿಸಿದೆ. ಇದರ ಜೊತೆಗೆ, ಅಮೆರಿಕವು ಇರಾನ್ ಮೇಲೆ ಹೇರಿರುವ ಎಲ್ಲಾ ಆರ್ಥಿಕ ನಿರ್ಬಂಧಗಳನ್ನು ಕೂಡಲೇ ಹಿಂಪಡೆಯಬೇಕು ಹಾಗೂ ಅಮೆರಿಕದಲ್ಲಿ ಸ್ಥಗಿತಗೊಳಿಸಲಾಗಿರುವ ಇರಾನ್‌ನ ಆಸ್ತಿಗಳನ್ನು ತಕ್ಷಣವೇ ಬಿಡುಗಡೆ ಮಾಡಬೇಕು ಎಂದು ಷರತ್ತು ವಿಧಿಸಿದೆ.

ಯುದ್ಧದಿಂದ ಹಾನಿಗೊಳಗಾಗಿರುವ ದೇಶದ ಮರುನಿರ್ಮಾಣಕ್ಕಾಗಿ ಅಮೆರಿಕ ಸಂಪೂರ್ಣ ಪರಿಹಾರವನ್ನು ಪಾವತಿಸಬೇಕು ಮತ್ತು ಮಧ್ಯಪ್ರಾಚ್ಯದಲ್ಲಿರುವ ಅಮೆರಿಕದ ಸೇನಾ ನೆಲೆಗಳಿಂದ ಸೇನೆಯನ್ನು ಸಂಪೂರ್ಣವಾಗಿ ಹಿಂಪಡೆಯಬೇಕು ಎಂಬುದು ಇರಾನ್‌ನ ಪ್ರಮುಖ ಬೇಡಿಕೆಯಾಗಿದೆ. ಈ ಎಲ್ಲಾ ಷರತ್ತುಗಳಿಗೆ ಅಮೆರಿಕ ಒಪ್ಪಿಗೆ ಸೂಚಿಸಿದರೆ, ತಾನು ಯಾವುದೇ ಕಾರಣಕ್ಕೂ ಅಣ್ವಸ್ತ್ರ ಹೊಂದುವ ಪ್ರಯತ್ನ ಮಾಡುವುದಿಲ್ಲ ಎಂದು ಇರಾನ್ ತನ್ನ ಪ್ರಸ್ತಾಪದಲ್ಲಿ ತಿಳಿಸಿದೆ.

ಇಸ್ಲಾಮಾಬಾದ್‌ನಲ್ಲಿ ನಿರ್ಣಾಯಕ ಶಾಂತಿ ಮಾತುಕತೆ

ಇರಾನ್‌ನ ಸುಪ್ರೀಂ ನ್ಯಾಷನಲ್ ಸೆಕ್ಯುರಿಟಿ ಕೌನ್ಸಿಲ್ ಮಾಹಿತಿ ನೀಡಿರುವಂತೆ, ಉಭಯ ದೇಶಗಳು ಒಪ್ಪಿರುವ ಈ ಕದನ ವಿರಾಮದ ಅಂತಿಮ ರೂಪುರೇಷೆಗಳನ್ನು ಸಿದ್ಧಪಡಿಸಲು ಪಾಕಿಸ್ತಾನದ ರಾಜಧಾನಿ ಇಸ್ಲಾಮಾಬಾದ್‌ನಲ್ಲಿ ಮಾತುಕತೆ ನಡೆಯಲಿದೆ. ಮುಂದಿನ 15 ದಿನಗಳ ಗಡುವಿನೊಳಗೆ ಈ ಉನ್ನತ ಮಟ್ಟದ ಸಂಧಾನ ಸಭೆಯು ನಡೆಯಲಿದ್ದು, ಇದು ಕದನ ವಿರಾಮವನ್ನು ಶಾಶ್ವತಗೊಳಿಸುವಲ್ಲಿ ಮಹತ್ವದ ಪಾತ್ರ ವಹಿಸಲಿದೆ. ಈ ಶಾಂತಿ ಮಾತುಕತೆಯು ಉಭಯ ದೇಶಗಳ ಭವಿಷ್ಯದ ರಾಜತಾಂತ್ರಿಕ ಸಂಬಂಧಗಳನ್ನು ನಿರ್ಧರಿಸುವ ಅತಿಮುಖ್ಯ ಘಟ್ಟವಾಗಿದೆ.

ಈ ಕದನ ವಿರಾಮಕ್ಕೆ ಉಭಯ ದೇಶಗಳು ಸಮ್ಮತಿಸುವ ಮುನ್ನ ಮಧ್ಯಪ್ರಾಚ್ಯದಲ್ಲಿ ಪರಿಸ್ಥಿತಿ ಅತ್ಯಂತ ಉದ್ವಿಗ್ನವಾಗಿತ್ತು. ಒಪ್ಪಂದ ವಿಫಲವಾದರೆ ಇರಾನ್ ಮೇಲೆ ಭೀಕರ ದಾಳಿ ನಡೆಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಕೆ ನೀಡಿದ್ದರು. ಅದೇ ಸಮಯದಲ್ಲಿ, ಇರಾನ್‌ನ ಪ್ರಮುಖ ಪೆಟ್ರೋಕೆಮಿಕಲ್ ಸ್ಥಾವರಗಳು ಮತ್ತು ತೈಲ ಸಂಸ್ಕರಣಾ ಕೇಂದ್ರಗಳ ಮೇಲೆ ಇಸ್ರೇಲ್ ಭಾರಿ ದಾಳಿ ನಡೆಸಿದ್ದು ಆತಂಕವನ್ನು ಇಮ್ಮಡಿಗೊಳಿಸಿತ್ತು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR